ಸಂಪುಟ : 10 ಸಂಚಿಕೆ: 163 ಪುಟ : 4+2 ಬೆಲೆ: 3.00 ರವಿವಾರ ಆಗಸ್ಟ್ 03 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 163 Pages : 4+2 Price : 3.00 Sunday August 03 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಗಾಂಧೀಜಿಯ ಕನಸಿನ ಗ್ರಾಮ ಸ್ವರಾಜ ಹಾಗೂ ವಿವೇಕ ಪಥ ಅನುಷ್ಠಾನ ಸಭೆಯಲ್ಲಿ ಸಚಿವ ಎಚ್.ಕೆ. ಪಾಟೀಲ

# ಗ್ರಾಮ ಪಂಚಾಯಿತಿಗಳು ಸ್ಥಳೀಯ ಸರ್ಕಾರಗಳಾಗಬೇಕು



ಮುಖ್ಯಮಂತ್ರಿಗಳು ಕಳೆದ ಎರಡು ದಿನಗಳ ಹಿಂದೆ ಗದಗ ಜಿಲ್ಲೆಯ ಶಾಸಕರ ಸಭೆ ಜರುಗಿಸಿದರು. ಜಿಲ್ಲೆಗೆ ಅಗತ್ಯವಿರುವ ಅನುದಾನ, ಯೋಜನೆಗಳ ಕುರಿತಂತೆ ಸುದೀರ್ಘ ಚರ್ಚೆ ನಡೆಸಲಾಯಿತು. ಈ ವೇಳೆ ಶಾಸಕರಾದ ಜಿ.ಎಸ್. ಪಾಟೀಲರು ನಮ್ಮೊಂದಿಗಿದ್ದರು. ಗದಗ ಜಿಲ್ಲೆಯ ಸರ್ಕಾರಿ ಶಾಲೆಗಳ ಶೌಚಾಲಯಗಳ ದುರಸ್ತಿ ಹಾಗೂ ನಿರ್ಮಾಣಕ್ಕೆ ಯೋಜನೆ ರೂಪಿಸಿ ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಲಾಗಿ, ಶೌಚಾಲಯಗಳ ನಿರ್ಮಾಣ ಹಾಗೂ ದುರಸ್ತಿಗಾಗಿ 50 ಕೋಟಿ ರೂ ಅನುದಾನ ಜಿಲ್ಲೆಗೆ ನೀಡುವಂತೆ ಕೋರಲಾಗಿದೆ.

– ಎಚ್.ಕೆ. ಪಾಟೀಲ.
ಜಿಲ್ಲಾ ಉಸ್ತುವಾರಿ ಸಚಿವರು.



**■ವಿಜಯಸಾಕ್ಷಿ ಸುದ್ದಿ, ಗದಗ**

ಗ್ರಾಮ ಸ್ವರಾಜ ಪರಿಕಲ್ಪನೆ ಗಾಂಧೀಜಿಯವರ ಕನಸಾಗಿತ್ತು. ಗ್ರಾಮ ಪಂಚಾಯಿತಿಗಳು ಸ್ಥಳೀಯ ಸರ್ಕಾರಗಳಾಗಬೇಕು. ಅಲ್ಲಿ ವಾಸಿಸುವವರ ಬದುಕಿನ ಗುಣಮಟ್ಟ ಉನ್ನತವಾಗಿರಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ನಗರದ ಕೆ.ಎಚ್. ಪಾಟೀಲ ಸಭಾಂಗಣದಲ್ಲಿ ಶನಿವಾರ ಜಿಲ್ಲಾಡಳಿತ, ಕೆ.ಎಚ್. ಪಾಟೀಲ ಪ್ರತಿಷ್ಠಾನ ಹಾಗೂ ವಿವೇಕ ಪಥ ಇವುಗಳ ಸಂಯುಕ್ತಾಶ್ರಯದಲ್ಲಿ ಏರ್ಪಡಿಸಿದ್ದ 'ಗಾಂಧೀಜಿಯ ಕನಸಿನ ಗ್ರಾಮ ಸ್ವರಾಜ' ಹಾಗೂ 'ವಿವೇಕ ಪಥ' ಅನುಷ್ಠಾನ ಸಭೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪಂಚಾಯತ್ ರಾಜ್ ವ್ಯವಸ್ಥೆಯಲ್ಲಿ ಸ್ಥಳೀಯ ಗ್ರಾಮ ಪಂಚಾಯಿತಿ ವ್ಯವಸ್ಥೆಯನ್ನು ಸುಭದ್ರಗೊಳಿಸಲು ಗ್ರಾಮ ಸ್ವರಾಜ ಕಾನೂನುಗಳನ್ನು ಮಾಡಲಾಗಿದೆ. ಅವುಗಳ ಅನುಷ್ಠಾನ ಸ್ಥಳೀಯ ಮಟ್ಟದಿಂದ ಜಾರಿಗೊಳಿಸುವ ಮೂಲಕ ಗ್ರಾಮ ಪಂಚಾಯಿತಿಗಳು ಸರ್ಕಾರಗಳಂತೆ ಕಾರ್ಯನಿರ್ವಹಿಸಬೇಕಿದೆ ಎಂದರು.

ಗದಗ ಜಿಲ್ಲೆ ಒಂದು ರೀತಿಯಲ್ಲಿ ಪ್ರಯೋಗಶಾಲೆ ಇದ್ದಂತೆ. ಎಲ್ಲ ಯೋಜನೆಗಳ ಅನುಷ್ಠಾನ ಜಿಲ್ಲೆಯ ಮೂಲಕವೇ ಆರಂಭಗೊಳ್ಳುತ್ತದೆ. ಅದೇ ರೀತಿ ಗ್ರಾಮ ಸ್ವರಾಜ ಕಾನೂನು ಸಹ ಜಿಲ್ಲೆಯಿಂದಲೇ ಸರಿಯಾಗಿ ಅನುಷ್ಠಾನವಾಗಲಿ ಎಂದು ತಿಳಿಸಿದರು.

ಮುಖ್ಯಮಂತ್ರಿ ಸಿದ್ಧರಾಮಯ್ಯನವರ ಸರ್ಕಾರ ಜಾರಿಗೊಳಿಸಿದ ಪಂಚ ಗ್ಯಾರಂಟಿ ಯೋಜನೆಗಳ ಮೂಲಕ ರಾಜ್ಯದ ಬಡವರ ಬದುಕು ಸುಸ್ಥಿರಗೊಳಿಸಿದೆ. ಕುಟುಂಬದ ಸುಭದ್ರ ನಿರ್ವಹಣೆಗೆ ಗ್ಯಾರಂಟಿ ಯೋಜನೆಗಳು ಸಹಕಾರಿಯಾಗಿವೆಯಲ್ಲದೇ ರಾಜ್ಯದಲ್ಲಿನ ಬಡತನ ನಿವಾರಣೆಯಾಗಿದೆ. ಪಂಚ ಗ್ಯಾರಂಟಿಗಳ ಮೂಲಕ ಬಡತನವನ್ನು ಬೇರು ಸಮೇತ ಕರ್ನಾಟಕ ರಾಜ್ಯದಲ್ಲಿ ಕಿತ್ತೊಗೆಯಲಾಗಿದೆ. ಜಿಲ್ಲೆ ಪಂಚ ಗ್ಯಾರಂಟಿ ಅನುಷ್ಠಾನದಲ್ಲಿ ಅರ್ಹರಿಗೆ ಯೋಜನೆಗಳನ್ನು ಹೆಚ್ಚು ಹೆಚ್ಚು ತಲುಪಿಸುವ ಮೂಲಕ ಪ್ರಥಮ ಸ್ಥಾನದಲ್ಲಿದೆ ಎಂದು ಸಚಿವ ಎಚ್. ಕೆ. ಪಾಟೀಲ ಹೇಳಿದರು.

ಮಾಜಿ ಶಾಸಕ ಡಿ.ಆರ್. ಪಾಟೀಲ ಮಾತನಾಡಿ, ಸಹಕಾರಿ ಭೀಷ್ಮ ಕೆ.ಎಚ್. ಪಾಟೀಲರು ಸಚಿವರಾಗುವವರೆಗೂ ಗ್ರಾಮದ ಸರಪಂಚರಾಗಿ ನಿರಂತರವಾಗಿ ಹಲವು ವರ್ಷಗಳವರೆಗೆ ಕಾರ್ಯನಿರ್ವಹಿಸಿ ಗ್ರಾಮಗಳ ಅಭಿವೃದ್ಧಿಗೋಸ್ಕರ ಶ್ರಮಿಸಿದ್ದಾರೆ. ಗ್ರಾಮ ಸ್ವರಾಜ ಕಾನೂನನ್ನು ಜಿಲ್ಲೆಯಲ್ಲಿ ಸರಿಯಾಗಿ ಅನುಷ್ಠಾನಗೊಳಿಸೋಣ. ವಾರ್ಡ್ ಹಾಗೂ ಗ್ರಾಮ ಸಭೆಗಳನ್ನು ಆಗಸ್ಟ್ 15ರೊಳಗಾಗಿ ನಡೆಸಿ ಗ್ರಾ.ಪಂ ಹಾಗೂ ನಗರಸಭೆಗಳಿಗೆ ವರದಿ ಕಳುಹಿಸಬೇಕು. ನಂತರ ಅಲ್ಲಿಂದ ವರದಿ ಸರ್ಕಾರಕ್ಕೆ ಸಲ್ಲಿಕೆಯಾಗಲಿದೆ. ನಾವೆಲ್ಲರೂ ನಮ್ಮ ಗ್ರಾಮಗಳ ಶಾಲೆಗಳ ಶೌಚಾಲಯ ದುರಸ್ತಿಯನ್ನು ಅಚ್ಚುಕಟ್ಟಾಗಿ ಅಕ್ಟೋಬರ್ 2ರೊಳಗಾಗಿ ಪೂರ್ಣಗೊಳಿಸುತ್ತೇವೆಂದು ದೃಢನಿರ್ಧಾರ ಕೈಗೊಳ್ಳೋಣ ಎಂದರು.

ಯಾವುದೇ ಯೋಜನೆಯನ್ನು ಶಿಸ್ತುಬದ್ಧವಾಗಿ ರೂಪಿಸಿ ಅನುಷ್ಠಾನಗೊಳಿಸಿದರೆ ಯಾವುದೂ ಅಸಾಧ್ಯವಲ್ಲ. ಇದಕ್ಕೆ ನೈಜ ಉದಾಹರಣೆ ಶುದ್ಧ ಕುಡಿಯುವ ನೀರಿನ ಯೋಜನೆ. ಅದೇ ತರಹ ಗ್ರಾಮ ಸ್ವರಾಜ ಕಾನೂನು ಶೇ 100ರಷ್ಟು ಅನುಷ್ಠಾನವಾಗಲಿ. ಪ್ರಭುವಿನೆಡೆಗೆ ಪ್ರಭುತ್ವ ಎಂಬ ವಿನೂತನ ಕಾರ್ಯಕ್ರಮ ಆರಂಭಿಸಲು ಚಿಂತನೆ ನಡೆದಿದ್ದು, ಆಗಸ್ಟ್ 15ರಿಂದ ಆರಂಭಗೊಳಿಸಲಾಗುವುದು. ಜಿಲ್ಲೆಯ ಗ್ರಾಮಗಳು ವ್ಯಸನಮುಕ್ತ, ವ್ಯಾಜ್ಯಮುಕ್ತ, ಬಹಿರ್ದೆಸೆ ಮುಕ್ತವಾಗಿಸಲು ಎಲ್ಲರೂ ಒಟ್ಟಾಗಿ ಪ್ರಯತ್ನಿಸಿ ಯಶಸ್ವಿಯಾಗೋಣ ಎಂದು ಸಚಿವ ಎಚ್.ಕೆ. ಪಾಟೀಲ ಕರೆ ನೀಡಿದರು.

▸▸3ನೇ ಪುಟಕ್ಕೆ

## ಕ್ರಿಕೇಟ್ ಟೂರ್ನಾಮೆಂಟ್ ಉದ್ಘಾಟನೆ ಇಂದು

**■ವಿಜಯಸಾಕ್ಷಿ ಸುದ್ದಿ, ಗದಗ**

'ಗದಗ ಉತ್ಸವ–2025'ರ ಅಂಗವಾಗಿ ಕ್ರಿಕೆಟ್ ಟೂರ್ನಾಮೆಂಟ್ ಹಮ್ಮಿಕೊಂಡಿದ್ದು, ಆಗಸ್ಟ್ 3ರಂದು ಬೆಳಿಗ್ಗೆ 9 ಗಂಟೆಗೆ ಅಂತಾರಾಷ್ಟ್ರೀಯ ಕ್ರಿಕೆಟಿಗ, ಬಿ.ಸಿ.ಸಿ.ಐ ಮಾಜಿ ಅಧ್ಯಕ್ಷ, ಅಂತಾರಾಷ್ಟ್ರೀಯ ಕ್ರಿಕೆಟ್ ತರಬೇತುದಾರ ಸುನೀಲ ಜೋಶಿ ಉದ್ಘಾಟಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಗದಗ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ, ದತ್ತಾ ಡೆವಲಪರ್ಸ್ ವ್ಯವಸ್ಥಾಪಕ ನಿರ್ದೇಶಕ ಕಿರಣ ಭೂಮಾ, ಗದಗ ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಕೃಷ್ಣಗೌಡ ಎಚ್.ಪಾಟೀಲ, ಮೂತ್ರಪಿಂಡ ಶಸ್ತ್ರ ಚಿಕಿತ್ಸಕ ಡಾ. ಶರಣ ಬಿ.ಆಲೂರ, ಖ್ಯಾತ ಕ್ರಿಕೆಟ್ ತರಬೇತುದಾರ ಪ್ರೊ. ಎಸ್.ಎಲ್. ಗುಳೇದಗುಡ್ಡ ಪಾಲ್ಗೊಳ್ಳುವರು. ಸಮಾರಂಭದ ಅಧ್ಯಕ್ಷತೆಯನ್ನು ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಅಧ್ಯಕ್ಷ ತಾತನಗೌಡ ಎಸ್.ಪಾಟೀಲ ವಹಿಸುವರು. ಮಹಿಳಾ ಘಟಕದ ಅಧ್ಯಕ್ಷೆ ನಂದಾ ಚಂದ್ರು ಬಾಳಿಹಳ್ಳಿಮಠ ಉಪಸ್ಥಿತರಿರುವರು.

ಟೂರ್ನಾಮೆಂಟ್‌ನ ಕ್ರೀಡಾ ಉಪ ಸಮಿತಿ ಚೇರಮನ್ ಶರಣು ವ್ಹಿ.ಗದಗ, ಕೋ–ಚೇರಮನ್ ಪ್ರಮೋದ ವಾರಕರ, ಗದಗ ಉತ್ಸವ–2025ರ ಚೇರಮನ್ ಆನಂದ ಎಲ್.ಪೊತ್ನೀಸ, ಕೋ–ಚೇರಮನ್ ಸದಾಶಿವಯ್ಯ ಎಸ್.ಮದರಿಮಠ, ಸಂಸ್ಥೆಯ ಉಪಾಧ್ಯಕ್ಷ ಶರಣಬಸಪ್ಪ ಎಸ್. ಗುಡಿಮನಿ, ವಿಜಯಕುಮಾರ ಎಸ್. ಮಾಟಲದಿನ್ನಿ, ಎಸ್.ಆರ್. ನಾಲ್ವತಾಡಮಠ, ಸಹ ಗೌರವ ಕಾರ್ಯದರ್ಶಿ ರಾಘವೇಂದ್ರ ಎಸ್. ಕಾಲವಾಡ, ಸೋಮನಾಥ ಕೆ.ಜಾಲಿ, ಕೋಶಾಧ್ಯಕ್ಷ ಸಂಜಯ ಸಿ.ಬಾಗಮಾರ, ಮಹಿಳಾ ಘಟಕದ ಮಾಜಿ ಅಧ್ಯಕ್ಷೆ ಜಯಶ್ರೀ ತಾತನಗೌಡ ಪಾಟೀಲ, ಸುವರ್ಣಾ ಎಸ್.ಮದರಿಮಠ, ಮಹಿಳಾ ಘಟಕದ ಗೌರವ ಕಾರ್ಯದರ್ಶಿ ಜ್ಯೋತಿ ರಾಮನಗೌಡ ದಾನಪ್ಪಗೌಡ್ರ ಸರ್ವರಿಗೂ ಸ್ವಾಗತ ಕೋರಿದ್ದಾರೆ ಎಂದು ಸಂಸ್ಥೆಯ ಗೌರವ ಕಾರ್ಯದರ್ಶಿ ಅಶೋಕಗೌಡ ಕೆ.ಪಾಟೀಲ ತಿಳಿಸಿದ್ದಾರೆ.

### ಮುಕ್ತಿಮಂದಿರ ಧರ್ಮಕ್ಷೇತ್ರದಲ್ಲಿ ಶ್ರೀರಂಭಾಪುರಿ ಲಿಂ.ಜಗದ್ಗುರು ವೀರಗಂಗಾಧರ ಪ್ರಸಾದ ನಿಲಯದ ಉದ್ಘಾಟಿಸಿದ ಸಚಿವ ಎಚ್.ಕೆ. ಪಾಟೀಲ

# ಪ್ರವಾಸಿ ತಾಣವಾಗಿಸುವಲ್ಲಿ ಪ್ರಾಮಾಣಿಕವಾಗಿ ಪ್ರಯತ್ನಿಸುವೆ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಜಾತಿ, ಮತ, ಪಂಥಗಳನ್ನು ಮೀರಿ ಮಾನವ ಕುಲಕೋಟಿಯ ಕಲ್ಯಾಣಕ್ಕಾಗಿಯೇ ಅವತರಿಸಿದ ಲಿಂ.ವೀರಗಂಗಾಧರ ಜಗದ್ಗುರುಗಳ ತಪೋಭೂಮಿ ಮುಕ್ತಿಮಂದಿರ ಧರ್ಮಕ್ಷೇತ್ರದಲ್ಲಿ ತ್ರಿಕೋಟಿ ಶಿವಲಿಂಗ ಪ್ರತಿಷ್ಠಾಪನಾ ಕಾರ್ಯ ಸಾಕಾರದೊಂದಿಗೆ ಇದೊಂದು ಪ್ರವಾಸಿ ತಾಣವಾಗಿಸುವ ನಿಟ್ಟಿನಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಹೆಚ್.ಕೆ. ಪಾಟೀಲ ಹೇಳಿದರು.

ಅವರು ಲಕ್ಷ್ಮೇಶ್ವರ ತಾಲೂಕಿನ ಮುಕ್ತಿಮಂದಿರ ಧರ್ಮಕ್ಷೇತ್ರದಲ್ಲಿ ನೂತನವಾಗಿ ನಿರ್ಮಿಸಿರುವ ಶ್ರೀರಂಭಾಪುರಿ ಲಿಂ.ಜಗದ್ಗುರು ವೀರಗಂಗಾಧರ ಪ್ರಸಾದ ನಿಲಯದ ಉದ್ಘಾಟಿಸಿ ಮಾತನಾಡುತ್ತಿದ್ದರು.

'ಮಾನವ ಧರ್ಮಕ್ಕೆ ಜಯವಾಗಲಿ–ಧರ್ಮದಿಂದಲೇ ವಿಶ್ವಕ್ಕೆ



ಶಾಂತಿ' ಎಂಬ ಅವರ ಮಹಾಮಂತ್ರ ಇಂದಿನ ಅಗತ್ಯವಾಗಿದೆ. ಸರ್ವ ಧರ್ಮ ಸಮನ್ವಯದ ಈ ಕ್ಷೇತ್ರದಲ್ಲಿ ಹಿಂದೂ, ಮುಸ್ಲಿಂ, ಕ್ರಿಶ್ಚಿಯನ್, ಬೌದ್ಧ ಹೀಗೆ ಸರ್ವಧರ್ಮ ಗುರುಗಳ ದೇವಸ್ಥಾನ ನಿರ್ಮಿಸಿರುವುದು ಅವರ ಸರ್ವ ಧರ್ಮದ ಸಮನ್ವಯತೆಗೆ ಸಾಕ್ಷಿಯಾಗಿದೆ. ಇಂದು ಧರ್ಮ ಗುರುಗಳ ಮಹಾಮಂತ್ರ, ವಿಚಾರಗಳನ್ನು ಎಲ್ಲರೂ ಬದುಕಿನಲ್ಲಿ ಅಳವಡಿಸಿಕೊಂಡು ಆತ್ಮಾವಲೋಕನದೊಂದಿಗೆ ಬಾಳಬೇಕಾಗಿದೆ. ಈ ಪುಣ್ಯ ಕ್ಷೇತ್ರ ನನ್ನ ತವರು ಜಿಲ್ಲೆಯಲ್ಲಿರುವುದು ನನ್ನ ಹೆಮ್ಮೆಯಾಗಿದ್ದು, ಪುಣ್ಯ ಕ್ಷೇತ್ರದ ಅಭಿವೃದ್ಧಿಗೆ ಬದ್ಧನಾಗಿದ್ದೇನೆ ಎಂದರು.

ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಬರಲು ಧಾರ್ಮಿಕ ಕ್ಷೇತ್ರಗಳಲ್ಲಿ ಪ್ರಸಾದ ನಿಲಯ ಅಗತ್ಯವಾಗಿದೆ. ಆದ್ದರಿಂದಲೇ ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿನ ದೇವಸ್ಥಾನಗಳು ಪ್ರಸಿದ್ಧಿ ಪಡೆಯಲು ಕಾರಣವಾಗಿದೆ. ಈ ನಿಟ್ಟಿನಲ್ಲಿ ಮಲೇಬೆನ್ನೂರಿನ ಶ್ರೀಮಠದ ಭಕ್ತರು ಪ್ರಸಾದ ನಿಲಯ ಪ್ರಾರಂಭದ ಜವಾಬ್ದಾರಿ ಹೊತ್ತಿರುವುದು ಶ್ಲಾಘನೀಯ ಎಂದರು.

ಮುಕ್ತಿಮಂದಿರ ಧರ್ಮಕ್ಷೇತ್ರದ ಪಟ್ಟಾಧ್ಯಕ್ಷರಾದ ಶ್ರೀ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯರು ಸೇರಿ ಕಲಾದಗಿ, ಎಮ್ಮಿಗನೂರ ಇತರೇ ಶಿವಾಚಾರ್ಯರೊಂದಿಗೆ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಅನುದಾನ ಕಲ್ಪಿಸುವಂತೆ ಮನವಿ ಮಾಡಿ ಮಾತನಾಡಿ, ಲಿಂ.ವೀರಗಂಗಾಧರ ಜಗದ್ಗುರುಗಳ ಸಂಕಲ್ಪ ಶ್ರೀಮಠದ ಮಹಾಭಕ್ತರಾದ ಡಿಸಿಎಂ ಡಿ.ಕೆ. ಶಿವಕುಮಾರ ಮತ್ತು ಭಕ್ತರ ತನು–ಮನ–ಧನದ ಸಹಾಯ–ಸಹಕಾರದಿಂದ ಸಾಕಾರಗೊಳ್ಳುತ್ತಿರುವುದು ಸಂತಸ ತಂದಿದೆ. ಈ ಪರಮಶ್ರೇಷ್ಠ ಕಾರ್ಯ ಪೂರ್ಣಗೊಳ್ಳಲು ಎಲ್ಲರೂ ಸಹಕರಿಸಬೇಕು ಎಂದರು.

ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠ ಮತ್ತು ಜಿ.ಎಂ. ಮಹಾಂತಶೆಟ್ಟರ ಅವರು, ತ್ರಿಕೋಟಿ ಶಿವಲಿಂಗ ಪ್ರತಿಷ್ಠಾಪನಾ ಕಾರ್ಯಕ್ಕೆ ಸರ್ಕಾರದಿಂದ ಈಗಾಗಲೇ 6 ಕೋಟಿ ರೂ ಬಿಡುಗಡೆಯಾಗಿದ್ದು, ಕಾರ್ಯ ಪ್ರಾರಂಭಗೊಂಡಿರುವ ಬಗ್ಗೆ ಮತ್ತು ರೂಪುರೇಷೆಯ ಬಗ್ಗೆ ತಿಳಿಸಿದರು.

ಎಮ್ಮಿಗನೂರಿನ ವಾಮದೇವ ಮಹಾಂತ ಶಿವಾಚಾರ್ಯ ಸ್ವಾಮೀಜಿ, ಕಲಾದಗಿ ಪಂಚಗ್ರಹ ಹಿರೇಮಠದ ಗಂಗಾಧರ ಶಿವಾಚಾರ್ಯ ಸ್ವಾಮೀಜಿ ಸೇರಿ ಹಲವು ಶಿವಾಚಾರ್ಯರಿದ್ದರು. ಶಾಸಕರಾದ ಡಾ. ಚಂದ್ರು ಲಮಾಣಿ, ಎಸ್.ವಿ. ಸಂಕನೂರ ಮಾತನಾಡಿ, ಕ್ಷೇತ್ರದಲ್ಲಿ ಮೂಲಭೂತ ಸೌಲಭ್ಯ ಕಲ್ಪಿಸುವ ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ಹೇಳಿದರು.

▸▸3ನೇ ಪುಟಕ್ಕೆ

### ಆರೋಪಕ್ಕೆ ಸೂಕ್ತ, ಸತ್ಯ ಮಾಹಿತಿ ನೀಡಿದರೆ ಕ್ರಮ ಕೈಗೊಳ್ಳುತ್ತೇವೆ: ಸಚಿವ ಎಚ್.ಕೆ. ಪಾಟೀಲ

# ರಾಜಕೀಯ ಉದ್ದೇಶದ ಆರೋಪ ಬೇಡ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಕೇಂದ್ರ ಸರಕಾರ ರಾಜ್ಯ ಸರ್ಕಾರದ ಬೇಡಿಕೆಯಷ್ಟು ಯೂರಿಯಾ ಗೊಬ್ಬರ ಸರಬರಾಜು ಮಾಡದ್ದರಿಂದ ಮತ್ತು ಈ ವರ್ಷ ಹೆಚ್ಚಿನ ಬೇಡಿಕೆ ಇರುವುದರಿಂದ ಒಂದಷ್ಟು ಗೊಬ್ಬರದ ಅಭಾವವಾಗಿದೆ. ಕಾಳಸಂತೆಯಲ್ಲಿ ಗೊಬ್ಬರ ಮಾರಾಟವಾಗುತ್ತಿದೆ ಎಂಬ ಆರೋಪಕ್ಕೆ ಸೂಕ್ತ, ಸತ್ಯ ಮಾಹಿತಿ ನೀಡಿದರೆ ಅಂಥವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು. ಕೇವಲ ರಾಜಕೀಯ ಉದ್ದೇಶದ ಆರೋಪ ಬೇಡ ಎಂದು ಜಿಲ್ಲಾ ಉಸ್ತುವಾರಿ ಸಚಿವ

ಲಕ್ಷ್ಮೇಶ್ವರದ ಐತಿಹಾಸಿಕ ಶ್ರೀ ಸೋಮೇಶ್ವರ ದೇವಸ್ಥಾನದ ಉತ್ತರ ದ್ವಾರ ದುರಸ್ಥಿ ಮತ್ತು ಅಭಿವೃದ್ಧಿಗಾಗಿ ಪ್ರವಾಸೋದ್ಯಮ ಇಲಾಖೆಯಿಂದ 50 ಲಕ್ಷ ರೂ ಅನುದಾನ ಕಲ್ಪಸುವುದಾಗಿ ಹೇಳಿ ವರ್ಷಗಳೇ ಕಳೆಯಿತು. ಅದಕ್ಕಾಗಿ ದೇವಸ್ಥಾನ ಸಮಿತಿ ಮತ್ತು ಹಿರಿಯರು ತಮ್ಮ ಬಳಿ ಸಾಕಷ್ಟು ಸಾರಿ ಮನವಿ ಮಾಡಿದರೂ ಪ್ರಯೋಜನವಾಗಿಲ್ಲ ಎಂಬ ಪ್ರಶ್ನೆಗೆ ಪ್ರತಿಕ್ರಿಯಿಸಿದ ಸಚಿವರು, ಆದಷ್ಟು ಬೇಗ ಅನುದಾನ ಕಲ್ಪಿಸುವುದಾಗಿ ಹೇಳಿದರು.

▸▸3ನೇ ಪುಟಕ್ಕೆ

### ಪಟ್ಟಣದಲ್ಲಿ ಇಂದಿರಾ ಕ್ಯಾಂಟೀನ್ ಉದ್ಘಾಟಿಸಿದ ಸಚಿವ ಎಚ್.ಕೆ. ಪಾಟೀಲ

# ಗ್ಯಾರಂಟಿ ಯೋಜನೆಗಳಿಂದ ರಾಜ್ಯ ಸಮೃದ್ಧವಾಗಿದೆ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ರಾಜ್ಯ ಕಾಂಗ್ರೆಸ್ ಸರ್ಕಾರದ ಮಹತ್ವಾಕಾಂಕ್ಷಿ ಪಂಚ ಗ್ಯಾರಂಟಿ ಯೋಜನೆಯಿಂದ ರಾಜ್ಯದ ಬೊಕ್ಕಸ ಮತ್ತಷ್ಟು ಸಮೃದ್ಧವಾಗಿದೆ. ಅಂತೆ–ಯೇ ರಾಜ್ಯದ ಪ್ರತಿ ಕ್ಷೇತ್ರದ ಅಭಿವೃದ್ಧಿಗೆ ಮುಖ್ಯಮಂತ್ರಿಗಳು 50 ಕೋಟಿ ರೂ ಅನುದಾನ ನೀಡಿರುವುದೇ ಇದಕ್ಕೆ ಸಾಕ್ಷಿ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಚ್. ಕೆ. ಪಾಟೀಲ ಹೇಳಿದರು.

ಅವರು ಶನಿವಾರ ಪಟ್ಟಣದಲ್ಲಿ ಇಂದಿರಾ ಕ್ಯಾಂಟೀನ್ ಉದ್ಘಾಟಿಸಿ ಮಾತನಾಡಿ, ಪಂಚ ಗ್ಯಾರಂಟಿ ಯೋಜನೆಗಳಿಂದ ಜನರ ಜೀವನ ಮಟ್ಟ ಎತ್ತರಕ್ಕೇರಿದೆ. ಪಂಚ ಗ್ಯಾರಂಟಿ ಯೋಜನೆಯಿಂದ ಪ್ರತಿ ತಿಂಗಳಿಗೆ ಪ್ರತಿ ಕುಟುಂಬಕ್ಕೆ 5 ಸಾವಿರ ರೂ.ನಷ್ಟು ಸಹಾಯವಾಗುತ್ತಿದೆ. ಇದು ಬಡತನ ಮುಕ್ತ–ಹಸಿವು ಮುಕ್ತ ಕರ್ನಾಟಕಕ್ಕೆ ನಾಂದಿಯಾಗಿದೆ. ರಾಜ್ಯದಲ್ಲಿ ಎಲ್ಲರೂ ಸ್ವಾವಲಂಬಿಯಾಗಿ



ಜೀವನ ನಡೆಸುವಂತಾಗಬೇಕು ಎಂಬ ಉದ್ದೇಶದಿಂದ ಕಾಂಗ್ರೆಸ್ ಸರ್ಕಾರ ಬಡವರು, ಕೂಲಿಕಾರರು, ಬೀದಿಬದಿ ವ್ಯಾಪಾರಸ್ಥರು, ಶ್ರಮಿಕರು ಸೇರಿ ಆರ್ಥಿಕವಾಗಿ ಹಿಂದುಳಿದವರ ಹಸಿವು ನೀಗಿಸುವ ನಿಟ್ಟಿನಲ್ಲಿ ಇಂದಿರಾ ಕ್ಯಾಂಟೀನ್ ಯೋಜನೆ ಅತ್ಯಂತ ಮಹತ್ವದ್ದಾಗಿದೆ. ಗದಗ ಜಿಲ್ಲೆಯಲ್ಲಿ ಗ್ಯಾರಂಟಿ ಯೋಜನೆಯ ಸದುಪಯೋಗವನ್ನು ಶೇ. 99ರಷ್ಟು ಫಲಾನುಭವಿಗಳು ಪಡೆದಿದ್ದಾರೆ ಎಂದರು.

ಶಾಸಕ ಡಾ. ಚಂದ್ರು ಲಮಾಣಿ ಮಾತನಾಡಿ, ಇಂದಿರಾ ಕ್ಯಾಂಟೀನ್ ಯೋಜನೆ ಬಡವರ ಪಾಲಿಗೆ ಮಹತ್ವದ್ದಾಗಿದೆ. ಆದರೆ ಯೋಜನೆಯ ಉದ್ದೇಶಗಳನ್ವಯ ನಿರಂತರ ಸೇವೆ, ಸಮರ್ಪಕ ನಿರ್ವಹಣೆಯಾಗಬೇಕು. ಶಿರಹಟ್ಟಿ ಪಟ್ಟಣದಲ್ಲಿನ ಇಂದಿರಾ ಕ್ಯಾಂಟೀನ್ ಕೇವಲ ಹೆಸರಿಗೆ ಮಾತ್ರ ಎನ್ನುವಂತಾಗಿದೆ. ಈ ಬಗ್ಗೆ ಅನೇಕ ಬಾರಿ ಹೇಳಿದರೂ ಯಾವುದೇ ಪ್ರಯೋಜನವಾಗಿಲ್ಲ. ಲಕ್ಷ್ಮೇಶ್ವರದಲ್ಲಿ ಪ್ರಾರಂಭವಾದ ಇಂದಿರಾ ಕ್ಯಾಂಟೀನ್‌ನಿಂದಲೇ ಪುರಸಭೆಯವರು ಪೌರ ಕಾರ್ಮಿಕರಿಗೆ ಉಪಾಹಾರದ ವ್ಯವಸ್ಥೆ ಕಲ್ಪಿಸಬೇಕು. ಅಲ್ಲದೇ ಲಕ್ಷ್ಮೇಶ್ವರ ಪಟ್ಟಣಕ್ಕೆ ನೀರು ಸರಬರಾಜು ಮಾಡಲು ಅಮೃತ 2.0 ಯೋಜನೆಯಡಿ ಹೆಚ್ಚುವರಿ ಅನುದಾನ

▸▸3ನೇ ಪುಟಕ್ಕೆ

ಇಂದಿರಾ ಕ್ಯಾಂಟೀನ್‌ನಲ್ಲಿ ನಿತ್ಯ ಮೆನುವಿನಂತೆ ಉಪಾಹಾರ, ಊಟ ಸಿಗಬೇಕು ಮತ್ತು ಸ್ವಚ್ಛತೆ, ಶುಚಿತ್ವ ಕಡ್ಡಾಯವಾಗಿ ಪಾಲನೆಯಾಗಬೇಕು. ಈ ನಿಟ್ಟಿನಲ್ಲಿ ಸ್ಥಳೀಯ ಪುರಸಭೆ ಸದಸ್ಯರು ನಿಗಾ ವಹಿಸಬೇಕು. ಲಕ್ಷ್ಮೇಶ್ವರ ಪಟ್ಟಣ ಐತಿಹಾಸಿಕ ಶ್ರೀಮಂತಿಕೆಯನ್ನು ಹೊಂದಿದೆ. ಗದಗ–ಲಕ್ಷ್ಮೇಶ್ವರ ರಸ್ತೆ ನಿರ್ಮಾಣ, ತುಂಗಭದ್ರಾ ನದಿಯಿಂದ ನೀರು ಪೂರೈಸುವ ಕುಡಿಯುವ ನೀರಿನ ಯೋಜನೆ ಮೇಲ್ದರ್ಜೆಗೇರಿಸುವುದು ಸೇರಿ ಈ ಭಾಗದ ಜನರ ಬೇಡಿಕೆ ಈಡೇರಿಸುವ ನಿಟ್ಟಿನಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.

# ಹೈಟೆಕ್ ಎಸಿ ಸ್ಲೀಪರ್ ಬಸ್‌ನಲ್ಲಿ ಜಿರಳೆ ಸವಾರಿ! ಪ್ರಯಾಣಿಕರಿಗೆ ಕಿರಿ ಕಿರಿ.. ಇದೆಂಥಾ ಅವ್ಯವಸ್ಥೆ?




■ ವಿಜಯಸಾಕ್ಷಿ ಸುದ್ದಿ, ವಿಜಯನಗರ

ಜಿರಳೆ ಅಂದ್ರೆ ಯಾರಿಗೆ ತಾನೇ ಭಯವಿಲ್ಲ ಹೇಳಿ. ಹುಲಿಗೆ ಹೆದರುತ್ತಿವೋ ಗೊತ್ತಿಲ್ಲ, ಆದ್ರೆ ಜಿರಳೆ ಅಂದ್ರೆ ಸ್ವಲ್ಪ ಕೈ-ಕಾಲು ಶೇಕ್ ಆಗೋದಂತು ನಿಜ. ಇಂತಹ ಜಿರಳೆಗಳು ಮನೆಯಷ್ಟೇ ಅಲ್ಲದೇ ಬಸ್ ಗಳಲ್ಲೂ ವಾಸ್ತವ್ಯ ಹೂಡುತ್ತಿವೆ. ಅರೆ ಏನಪ್ಪಾ ಬಸ್ ನಲ್ಲಿ ಜಿರಳೆ ಅಂತೀರಾ? ಹೌದು, ಇದು ದುಬಾರಿ ದುಡ್ಡು ಕೊಟ್ಟು ಹೋಗುವ ಐಷಾರಾಮಿ ಎಸಿ ಬಸ್ ಗಳ ಕಥೆ... ಅಲ್ಲ ಸ್ವಾಮಿ ವ್ಯಥೆ! ಎಸ್, ಉತ್ತರ ಕರ್ನಾಟಕದಿಂದ ದಕ್ಷಿಣ ಕರ್ನಾಟಕ ಕೊಂಚ ದೂರಾನೆ ಇದೆ. ಉದಾಹರಣೆಗೆ ಬೆಳಗಾವಿಯಿಂದ ರಾಜಧಾನಿ ಬೆಂಗಳೂರಿಗೆ ಬರಬೇಕಾದರೆ ಸಮಯ 7 ರಿಂದ 8 ಗಂಟೆ ಬೇಕೆ ಬೇಕು. ಇಂತಹ ಸಮಯದಲ್ಲಿ ಸ್ವಲ್ಪ ರಿಚ್ ಜನರು ಐಷಾರಾಮಿ ಎಸಿ ಬಸ್ ಗಳ ಮೊರೆ ಹೋಗ್ತಾರೆ. ರಿಚ್ ಜನರಷ್ಟೇ ಅಲ್ಲದೇ ರಾತ್ರಿಯ ಸುಖಮಯ ಸಂಚಾರಕ್ಕಾಗಿ ಸಾಮಾನ್ಯ ಜನರು ಕೂಡ ಐಷಾರಾಮಿ ಎಸಿ ಗಳ ಮೊರೆ ಹೋಗುತ್ತೀರೋದು ನಿಜ. ಆದ್ರೆ ನಿದ್ರೆ ಸುಖವಾಗಿರಲಿ ಅಂತ ಅಷ್ಟು ದುಡ್ಡು ಕೊಟ್ಟು ಹೋದ್ರೂ ಜನರಿಗೆ ನೆಮ್ಮದಿಯ ನಿದ್ದೆ ಇಲ್ಲದಂತಾಗಿದೆ ಮರ್ರೆ.. ಯಾಕೆ ಅಂತೀರಾ.. ಈ ಸ್ಟೋರಿ ಪೂರ್ತಿ ಓದಿ.

ಹೌದು, ಸಾಮಾನ್ಯ ಸಾರಿಗೆ ಬಸ್‌ಗಳು ಬೆಂಗಳೂರಿನಿಂದ ಬೇರೆ ಬೇರೆ ಊರುಗಳಿಗೆ ಸಾಕಷ್ಟಿವೆ. ಕಲ್ಯಾಣ ಕರ್ನಾಟಕದ ಜಿಲ್ಲೆಗಳು ರಾಜಧಾನಿಯಿಂದ ದೂರ ಇರುವುದರಿಂದ ಕೆಎಸ್‌ಆರ್‌ಟಿಸಿಯ ಐಷಾರಾಮಿ ಬಸ್‌ಗಳಿವೆ. ಪ್ರಯಾಣ ದರವೂ ಅಷ್ಟೇ ಐಷಾರಾಮಿಯಾಗಿವೆ. ದೂರದ ಪ್ರಯಾಣ ಆಗಿರುವುದರಿಂದ ಸಾಮಾನ್ಯ ಬಸ್‌ಗಳಲ್ಲಿ ಪ್ರಯಾಣಿಸುವುದು ಹೈರಾಣು ಎನಿಸುವುದರಿಂದ ಸ್ಥಿತಿವಂತರು ಐಷಾರಾಮಿ ಬಸ್ ಪ್ರಯಾಣಕ್ಕೆ ಆದ್ಯತೆ ನೀಡುವುದು ಸಹಜ. ಆದರೆ ಜಿರಳೆಗಳಿಗೆ ಸ್ಥಿತಿವಂತರೂ ಅಷ್ಟೇ. ಜನಸಾಮಾನ್ಯರೂ ಅಷ್ಟೇ.

ಹೌದ್ರಿ.. ಇಲ್ಲೋರ್ವ ವ್ಯಕ್ತಿ ಸುಖಮಯ ನಿದ್ದೆ ಕೊಡುವ ಎಸಿ ಬಸ್ ನಲ್ಲಿ ರಾತ್ರಿಯಿಡೀ ಜಾಗರಣೆ ಮಾಡಿದ ಘಟನೆ ಬೆಂಗಳೂರಿನಿಂದ ಸಿಂಧನೂರಿಗೆ ತೆರಳುವ ಕಲ್ಯಾಣ ರಥ ಎಸಿ ಸ್ಲೀಪರ್ ಬಸ್‌ನಲ್ಲಿ ಜರುಗಿದೆ.

ಆಗಸ್ಟ್ 1 ರಂದು ರಾತ್ರಿ 9-48ಕ್ಕೆ ಬೆಂಗಳೂರಿನಿಂದ ಸಿಂಧನೂರಿಗೆ ತೆರಳುವ ಕಲ್ಯಾಣ ರಥ ಎಸಿ ಸ್ಲೀಪರ್ ಬಸ್‌ನ ಆಸನ ಸಂಖ್ಯೆ 01ರ ಪ್ರಯಾಣಿಕರೊಬ್ಬರು ಜಿರಳೆ ಕಾಟದಿಂದ ರಾತ್ರಿಯಿಡೀ ಜಾಗರಣೆ ಮಾಡಿದ್ದಾರೆ. ಬಸ್ ನಲ್ಲಿ ಪ್ರಯಾಣ ಆರಂಭವಾದ ಬಳಿಕ ಕಣ್ತುಂಬ ನಿದ್ದೆ ಮಾಡಿದರಾಯಿತು ಎಂದು ಲೈಟ್ ಆಫ್ ಮಾಡಿ ಮಲಗಿದ ಐದು ನಿಮಿಷದಲ್ಲೇ ಮೈ ಮೇಲೆ ಏನೋ ಹರಿದಾಡಿದಂತಾಗಿದೆ. ಹಾಗಾಗಿ ಲೈಟ್ ಆನ್ ಮಾಡಿ ನೋಡಿದಾಗ ಜಿರಳೆಯೊಂದು ಓಡಾಡುತ್ತಿದೆ. ಕೂಡಲೇ ಈ ವಿಷಯವನ್ನು ನಿರ್ವಾಹಕ ವೀರೇಶ ಅವರ ಬಳಿ ಹೇಳಿಕೊಂಡಾಗ, 'ನಾವೇನ್ ಮಾಡಕಾಗುತ್ತೆ? ದೂರು ಕೊಡಿ.' ಎಂದು ವಿನಮ್ರವಾಗಿ ಕೋರಿದರು ಎಂದು ಪ್ರಯಾಣಿಕರೊಬ್ಬರು ವಿಜಯಸಾಕ್ಷಿಗೆ ತಿಳಿಸಿದರು.

ಬಸ್ ಐಷಾರಾಮಿಯಾಗಿದ್ದರೆ ಮಾತ್ರ ಸಾಲದು. ಸಹಸ್ರಾರು ರೂಪಾಯಿ ನೀಡಿ ಟಿಕೆಟ್ ಖರೀದಿಸುವ ಪ್ರಯಾಣಿಕ ಆರಾಮಾಗಿ ನಿದ್ದೆ ಮಾಡುವ ವಾತಾವರಣ, ಸ್ವಚ್ಛತೆ ಬಸ್‌ನಲ್ಲಿ ಇರಬೇಕು ಎಂಬುದು ಪ್ರಯಾಣಿಕರ ಆಗ್ರಹ. ಈ ಬಗ್ಗೆ ಸಂಬಂಧಿಸಿದ ಅಧಿಕಾರಿಗಳು ಯಾವ ಕ್ರಮ ಕೈಗೊಳ್ಳುತ್ತಾರೆ ಎಂಬುದನ್ನು ಕಾದು ನೋಡಬೇಕು.

# ಮಿಮ್ಸ್ ನಲ್ಲಿ ಮುಂದುವರಿದ ಸಾವಿನ ಸರಣಿ: ಆತ್ಮಹತ್ಯೆಗೆ ಶರಣಾದ ಮತ್ತೋರ್ವ ವಿದ್ಯಾರ್ಥಿನಿ!

■ ವಿಜಯಸಾಕ್ಷಿ ಸುದ್ದಿ, ಮಂಡ್ಯ

ಬಿಎಸ್ಸಿ ವ್ಯಾಸಂಗ ಮಾಡುತ್ತಿದ್ದ ವಿದ್ಯಾರ್ಥಿನಿಯೋರ್ವಳು ನೇಣಿಗೆ ಶರಣಾಗಿರುವ ಘಟನೆ ಮಂಡ್ಯ ಮಿಮ್ಸ್ ಆಸ್ಪತ್ರೆಯ ವಸತಿ ನಿಲಯದಲ್ಲಿ ಜರುಗಿದೆ.

ಈ ಮೂಲಕ ಮಿಮ್ಸ್ ನಲ್ಲಿ ವಿದ್ಯಾರ್ಥಿಗಳ ಸಾವಿನ ಪ್ರಕರಣಗಳ ಸಂಖ್ಯೆ ಮುಂದುವರಿದಿದೆ. ಮೃತ ವಿದ್ಯಾರ್ಥಿನಿಯನ್ನು ನಿಷ್ಕಲ ಎಂದು ಗುರುತಿಸಲಾಗಿದೆ. ನಿಷ್ಕಲ, ಮಿಮ್ಸ್ ನಲ್ಲಿ ಅಂತಿಮ ವರ್ಷದ ಬಿಎಸ್ಸಿ ವ್ಯಾಸಂಗ ಮಾಡುತಿದ್ದರು. ನಿಷ್ಕಲ ಸಾವಿಗೆ ನಿಖರ ಕಾರಣ ತಿಳಿದು ಬಂದಿಲ್ಲ. ಸ್ಥಳಕ್ಕೆ ಮಂಡ್ಯ ಈಸ್ಟ್ ಪೊಲೀಸರು ಭೇಟಿ ನೀಡಿ ಪರಿಶೀಲನೆ ಮಾಡಿದ್ದಾರೆ. ಇನ್ನೂ ಕಳೆದ ಜುಲೈ 21 ರಂದು ಇದೆ ಮಿಮ್ಸ್ ಹಾಸ್ಟೆಲ್ ನಲ್ಲಿ ವಿದ್ಯಾರ್ಥಿ ಭರತ್ ಯತ್ತಿನಮನೆ ಆತ್ಮಹತ್ಯೆಗೆ ಶರಣಾಗಿದ್ದ. ಭರತ್ ಸಾವು ಮಾಸುವ ಮುನ್ನವೇ ಈಗ ನಿಷ್ಕಲ ಸಾವನ್ನಪ್ಪಿರುವುದು ಆತಂಕಕ್ಕೆ ಕಾರಣವಾಗಿದೆ.

## ಅರುಣಾ ನರೇಂದ್ರರ 'ಕಮಲಿಯ ಕುರಿಮರಿ' ಪುಸ್ತಕ ವಿಮರ್ಶೆ


# ಓದುತ್ತಾ ನೀವೂ ಮಕ್ಕಳಾಗಿ!

ವೃತ್ತಿಯಲ್ಲಿ ಶಿಕ್ಷಕಿಯಾಗಿ ಸೇವೆ ಸಲ್ಲಿಸುತ್ತಿರುವ ಅರುಣಾ ನರೇಂದ್ರ ಕೊಪ್ಪಳದವರು. ಅವರು ಪ್ರವೃತ್ತಿಯಲ್ಲಿ ಮಕ್ಕಳ ಸಾಹಿತಿಯಾಗಿ, ಗಜಲ್ ಲೇಖಕಿಯಾಗಿ ಈ ನಾಡಿನಲ್ಲಿ ತಮ್ಮನ್ನು ತಾವು ಗುರುತಿಸಿಕೊಂಡಿದ್ದಾರೆ. ಮಕ್ಕಳಿಗಾಗಿ 9 ಕವನ ಸಂಕಲಗಳನ್ನು ಬರೆದು ಪ್ರಕಟಿಸಿ, ಮಕ್ಕಳ ಸಾಹಿತಿಯಾಗಿ ಜನಪ್ರಿಯತೆ ಪಡೆದಿದ್ದಾರೆ. ಇತ್ತೀಚೆಗೆ ಲೋಕಾರ್ಪಣೆಗೊಂಡ ಅವರ ಮಕ್ಕಳ ಕವನ ಸಂಕಲನ 'ಕಮಲಿಯ ಕುರಿಮರಿ' ನನ್ನ ಕೈ ಸೇರಿ ಬಿಡದಂತೆ ಓದಿಸಿಕೊಂಡಿತು. ಓದುತ್ತ ಓದುತ್ತಾ ನಾನೂ ಮಗುವಾಗಿಬಿಟ್ಟೆ. ಈ ಕೃತಿಯಲ್ಲಿಯ ಕವಿತೆಗಳು ನನ್ನ ಮನಸ್ಸನ್ನು ಸೆಳೆದು ಮುದಗೊಳಿಸಿದವು.

**ಕೆಟ್ಟು ಹೋಗಿರುವ ಫೋನ್**
**ಹಿಡ್ಕೊಂಡು**
**ಮಾಮಗೆ ಮಾತಾಡ್ತಾಳೆ**
**ಚಾಕ್ಲೇಟ್ ಕೊಡಿಸದ ಅಣ್ಣನ ಬಗ್ಗೆ**
**ಅಪ್ಪಾಗೆ ಚಾಡಿ ಹೇಳ್ತಾಳೆ**

ಕವಿತೆಯಲ್ಲಿ ವ್ಯಕ್ತವಾದ ಈ ಮೇಲಿನ ಸಾಲುಗಳು ಮಕ್ಕಳ ಆಲೋಚನೆ ಮತ್ತು ಕಲ್ಪನಾ ಶಕ್ತಿಯನ್ನು ಎತ್ತಿ ತೋರಿಸುವಂತಿವೆ. ಎಲ್ಲರ ಮನೆಯಲ್ಲೂ ಮಕ್ಕಳ ಸಾಮಾನ್ಯವಾಗಿ ನಿರ್ಜೀವ ವಸ್ತುಗಳನ್ನು ಹಿಡಿದುಕೊಂಡು ದೂರದ ಸಂಬಂಧಿಕರೊಂದಿಗೆ ಸಂಭಾಷಣೆ ಮಾಡುವ ಅದೆಷ್ಟೋ ಸನ್ನಿವೇಶಗಳು ಸಾಮಾನ್ಯ.

ಮಕ್ಕಳು ತಮ್ಮ ತೊದಲ ನುಡಿಗಳ ಮೂಲಕ ಅಣ್ಣ, ತಮ್ಮ, ಅಕ್ಕನ ಬಗ್ಗೆ ಚಾಡಿ ಹೇಳಿ ಅಪ್ಪ ಅಮ್ಮನ ಕಡೆಯಿಂದ ಶಿಕ್ಷೆ ಕೊಡಿಸಿ ಕುಣಿದು ನಲೆದಾಡುವ ಖುಷಿಗೆ ಪಾರವೇ ಇಲ್ಲ. ಅರುಣಾ ನರೇಂದ್ರ ಮಕ್ಕಳ ಬಾಲ್ಯದಲ್ಲಿ ನಡೆಯುವ




ಸಂಭಾಷಣೆಯನ್ನು ತಮ್ಮ ಕವಿತೆಯ ಸಾಲಿನಲ್ಲಿ ದಾಖಲಿಸಿದ್ದಾರೆ.

**ಬೀದಿಯ ನಾಯಿ ಅಡ್ಡ ಬಂದಿತ್ತು**
**ಬ್ಯಾಲೆನ್ಸ್ ಸಿದ್ದುಗೆ ಸಿಗದೆ ಹೋಯಿತು**
**ತೆಗ್ಗಲಿ ಸೈಕಲ್ ಧೊಪ್ಪನೆ ಬಿತ್ತು**
**ಓಡುತ ನಾಯಿ ಕುಯ್ಯಿ ಕುಯ್ಯಿ**
**ಅಂತು**

ಅರುಣಾ ನರೇಂದ್ರ ಅವರು ಈ ಕವಿತೆಯಲ್ಲಿ ಅತ್ಯಂತ ಸುಂದರವಾದ ಪದಗಳನ್ನು ಹುಡುಕಿ ಹೆಣೆದಿದ್ದಾರೆ.

ಹರಿಯುವ ಹಾವನ್ನೇ ಹಿಡಿದು ಕೊರಳಿಗೆ ಹಾಕಿಕೊಳ್ಳುವಷ್ಟು ಧೈರ್ಯ ಬಾಲ್ಯದಲ್ಲಿ ಮಕ್ಕಳಿಗೆ ಇರುತ್ತೆ ಎನ್ನುವ ಅಕ್ಷರಶಃ ಸತ್ಯ.

ಅಂಬೆಗಾಲಿಡುವ ಮಕ್ಕಳು ಅಂಗಳದಲ್ಲಿ ಹೆಜ್ಜೆ ಇಡಲು ಪ್ರಾರಂಭ ಮಾಡಿದರೆ ಹೆತ್ತವರಿಗೆ ಎರಡು ಕಣ್ಣು ಸಾಲುವುದೇ ಇಲ್ಲ. ಅವರನ್ನು ಗಮನಿಸಲು ಬಾಲ್ಯದಲ್ಲಿ ಸೈಕಲ್ ಕಲಿಯಲು ಮಕ್ಕಳ ಪಡುವ ಹರಸಾಹಸವನ್ನು ನೋಡಲೇಬೇಕು. ತಮ್ಮ ಕಾಲು ನೆಲಕ್ಕೆ ನಿಲುಕದಿದ್ದರೂ ಸೈಕಲ್ ಏರಿ ದಾರಿಗೆ ಅಡ್ಡ ಬರುವ ಕೋಳಿ, ಕುರಿ, ನಾಯಿ, ಬೆಕ್ಕಿನ ಮೇಲೆ ಬಿದ್ದು ಗಾಯ ಮಾಡಿಕೊಂಡು ಮನೆಗೆ ಜಗಳ ತರುವ ಮಕ್ಕಳ ಕೀಟಲೆ-ತುಂಟಾಟವನ್ನು ಈ ಕವಿತೆಯಲ್ಲಿ ನೋಡಬಹುದು.

**ಇಲ್ಲಿ ನೋಡು ಸುಬ್ಬು ಬರೆದ**
**ಎಷ್ಟು ಚಂದ ಅಕ್ಷರ**
**ಒತ್ತು ದೀರ್ಘ ತಲೆಗೆ ಕೊಂಬು**
**ಕಟ್ಟಿ ಇಟ್ಟ ಹೂ ಸರ**

ಈ ಕವಿತೆಯ ಸಾಲುಗಳಲ್ಲಿ ಅರುಣ ನರೇಂದ್ರ ಅವರು ಹೆತ್ತವರಿಗೆ ಒಂದು ಸಂದೇಶವನ್ನು ರವಾನಿಸಿದ್ದಾರೆ. ಮಕ್ಕಳಿಗೆ ಕಲಿಕಾ ವಿಷಯಗಳನ್ನು ಕಲಿಸುವಾಗ ಕಲಿಕೆಯಲ್ಲಿ ಮುಂದಿರುವ ಮಕ್ಕಳು ಸರಿಯಾದ ಉತ್ತರ ಕೊಟ್ಟಾಗ ಅವರನ್ನು ಹೊಗಳುವುದು. ಅವರಿಗೆ ಚಪ್ಪಾಳೆಯನ್ನು ತಟ್ಟಿಸುವ ಮೂಲಕ ಇನ್ನುಳಿದ ಹಿಂದುಳಿದ ಮಕ್ಕಳಿಗೆ ನಾನು ಅವರಂತೆ ಕಲಿಯಬೇಕೆನ್ನುವ ಕಲಿಕಾ ಆಸಕ್ತಿಯನ್ನು ಪ್ರಚೋದನೆ ಮಾಡುವಂತೆ ಸಲಹೆ ನೀಡಿದ್ದಾರೆ.

ಕಲಿಕೆಯಲ್ಲಿ ಆಸಕ್ತಿ ತೋರಿಸದ ಹಿಂದುಳಿದ ಮಕ್ಕಳಿಗೆ ಹೆತ್ತವರು ಶಿಕ್ಷಿಸುವುದು ಬೇಡ. ಕಲಿಕೆಯಲ್ಲಿ ಮುಂದಿರುವ ಮಕ್ಕಳೊಂದಿಗೆ ಅವರನ್ನು ಓದಲು ಬಿಡಿ. ಈ ರೀತಿಯಾಗಿಯೂ ಮಕ್ಕಳ ಕಲಿಕಾ ಸಾಮರ್ಥ್ಯವನ್ನು ಹೆಚ್ಚಿಸಬಹುದು ಎಂದು ತಿಳಿಸಿದ್ದಾರೆ.

**ವಾರಕ್ಕೆ ಎರಡೇ ಎರಡು ದಿನ**
**ಶಾಲೆ ಇರಬೇಕಿತ್ತು**
**ಉಳಿದ ಎಲ್ಲಾ ದಿನಗಳನ್ನು**
**ಆಟಕೆ ಇಡಬೇಕಿತ್ತು**

ನಮ್ಮ ಬಾಲ್ಯದ ದಿನಗಳನ್ನು ನಾವೇ ಮತ್ತೆ ಮೇಲಕ್ಕೆ ಹಾಕಿ ನಗುವಂತಿದೆ ಅರುಣಾ ನರೇಂದ್ರ ಬರೆದಿರುವ ಈ ಮೇಲಿನ ಸಾಲುಗಳು.

ಬಾಲ್ಯದ ಹಂತದಲ್ಲಿ ಮಕ್ಕಳು ಅತಿ ಹೆಚ್ಚು ಆಟದ ಕಡೆಗೆ ಒಲವನ್ನು ತೋರಿಸುತ್ತಾರೆ ಮತ್ತು ಆಕರ್ಷಿತರಾಗಿರುತ್ತಾರೆ. ಅವರಿಗೆ ಶಾಲೆ, ಪಾಠ ಬೋಧನೆ ಸೆರೆಮನೆಯಲ್ಲಿ ಕೈದಿಗಳನ್ನು ಕೂಡಿಟ್ಟಿರುವ ಹಾಗೆ ಹಿಂಸೆ ಆಗುತ್ತಿರುತ್ತದೆ. ನಿತ್ಯವೂ ಶಾಲೆಗೆ ಹೋಗಿ ಗುರುಗಳ ಪಾಠಗಳನ್ನು ಕೇಳಿ ಮನೆ ಕೆಲಸದ ಕಾರ್ಯವನ್ನು ಮಾಡುವ ಅಷ್ಟೊತ್ತಿಗಾಗಲೇ ಅವರಿಗೆ ಶಾಲೆಯ ಬೇಸರವಾಗಿ ಬಿಡುತ್ತಿದೆ. ರಜಾ ದಿನ ಬಂದರೆ ಸಾಕು, ಗೆದ್ದ ಹಾಗೆ ಮಕ್ಕಳು ಖುಷಿ ಖುಷಿಯಾಗಿ ಸಮಯವನ್ನು ಕಳೆಯುತ್ತಾರೆ. ಅರುಣಾ ನರೇಂದ್ರ ಆಟದೊಂದಿಗೆ ಮಕ್ಕಳಿಗೆ ಪಾಠವನ್ನು ಹೇಳಿ ಕೊಡಿ ಎಂದು ಶಿಕ್ಷಕರಿಗೆ ಕಿವಿಮಾತು ಹೇಳಿದ್ದಾರೆ.

**ಜಾತ್ರೆ ತೇರು ಅಜ್ಜಿ ಊರು**
**ಮೋಜು ಮಸ್ತಿ ಸಾಕು**
**ಮತ್ತೆ ಓದಿ ಬರೆಯಬೇಕು**
**ಬೇಗ ಬನ್ನಿ ಮಕ್ಕಳೇ**

ನಮ್ಮ ಬಾಲ್ಯದ ದಿನಗಳಲ್ಲಿ ಶಾಲಾ ರಜಾ ಕೊಟ್ಟಾಗ ಅಜ್ಜ ಅಜ್ಜಿಯ ಊರಿಗೆ ಹೋಗಿ ಜಾತ್ರೆಯಲ್ಲಿ ದೇವರ ತೇ-ೇರು ನೋಡಿ ಉತ್ತತ್ತಿ ಎಸೆದು, ಬಳೆ, ಬಲೂನ್, ಆಟಿಕೆಯ ಗೊಂಬೆಗಳನ್ನು ತಂದು ಊರ ಕೆರೆಯಲ್ಲಿ ಅತ್ತೆಯೊಂದಿಗೆ ಬಟ್ಟೆ ತೊಳೆಯಲು ಹೋಗಿ ಮೈ ನೆನೆಸಿಕೊಂಡು ಜ್ವರ ಬಂದು ಮಲಗಿದ ಘಟನೆಗಳು ನೆನಪಾದವು.

**ಕುರಿಮರಿ ನೋಡಲು**
**ಕಮಲಿಯು ಬಂದಳು**
**ಹಟ್ಟಿಯ ಬಾಗಿಲು ತೆರೆಯುತಲಿ**
**ಮೈಯನು ಮುಟ್ಟಲು**
**ಹತ್ತಿಯ ತೆರದಿ**
**ಹಿತವೆನಿಸಿತು ಆ ಗಳಿಗೆಯಲಿ**

ಈ ಕವಿತೆಯ ಸಾಲುಗಳು ಸಾಕು ಪ್ರಾಣಿಗಳ ಮಹತ್ವವನ್ನು ಎತ್ತಿ ತೋರಿಸುವಂತಿವೆ. ಸಾಕು ಪ್ರಾಣಿಗಳನ್ನು ಕುಟುಂಬದ ಸದಸ್ಯರ ಹಾಗೇ ನೋಡಿಕೊಳ್ಳುವ ಸಂಸ್ಕೃತಿ, ಆಚರಣೆಯ ಸಂಪ್ರದಾಯ ನಮ್ಮದು. ಹಳೆಯ ಮನೆಯ ಛಾವಣಿಯಲ್ಲಿ ಎತ್ತಿನೊಂದಿಗೆ ಮನೆಯ ಎಲ್ಲಾ ಸದಸ್ಯರು ನಿಂತುಕೊಂಡು ಫೋಟೋ ತೆಗಿಸಿಕೊಂಡಿರುವ ಭಾವಚಿತ್ರ ತಮ್ಮ ಕಣ್ಣಿಗೆ ಕಂಡಿರುತ್ತದೆ.

ಕಮಲಿ ತನ್ನ ಕುರಿ ಮರಿಯ ಮೇಲೆ ಇಟ್ಟರುವ ಕಾಳಜಿ, ಪ್ರೀತಿಯನ್ನು ಈ ಕಮಲಿಯ ಕುರಿಮರಿ ಪುಸ್ತಕದಲ್ಲಿ ನೋಡಬಹುದಾಗಿದೆ.

ತಾನು ಇಷ್ಟಪಟ್ಟು ಸಾಕಿದ ಪ್ರಾಣಿಗಳಿಗೆ ಗಾಯವಾದರೆ ತಾವೇ ಅತ್ತು ದೇವರ ಮೊರೆ ಹೋಗಿ ಬೇಡಿಕೊಳ್ಳುವ ಅದೆಷ್ಟು ಘಟನೆಗಳು ನಮ್ಮ-ನಿಮ್ಮ ಮನೆಯಲ್ಲಿ ನಮ್ಮ ಮಕ್ಕಳೇ ಮಾಡಿರುವುದು ನೆನಪಿಗೆ ಬರುತ್ತದೆ.



ಉತ್ತಮ ಸಂದೇಶಗಳನ್ನು, ಉತ್ತಮ ಕಲಿಕಾ ಮೌಲ್ಯಗಳನ್ನು ಹೊಂದಿರುವ ಅರುಣಾ ನರೇಂದ್ರ ಅವರ ಈ 'ಕಮಲಿಯ ಕುರಿಮರಿ' ನಿಮ್ಮ ಮಕ್ಕಳಿಗೆ ಓದಲು, ಹಾಡಿ ನಲಿಯಲು ತುಂಬಾ ಉಪಯುಕ್ತವಾಗಿದೆ.

-ಚಂದ್ರಕಲಾ ಮ.ಇಟಗಿಮಠ.
ಸಂಸ್ಥಾಪಕ ಅಧ್ಯಕ್ಷರು, ಕಪ್ಪತ್ತಗಿರಿ ಫೌಂಡೇಶನ್.

# ಶೈಕ್ಷಣಿಕ ಸಾಲ ಯೋಜನೆಗೆ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಆರ್ಯ ವೈಶ್ಯ ಸಮುದಾಯ ಅಭಿವೃದ್ಧಿ ನಿಗಮದಿಂದ 2025-26ನೇ ಸಾಲಿನಲ್ಲಿ ಅರಿವು ಶೈಕ್ಷಣಿಕ ಸಾಲ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ.

ಈ ಯೋಜನೆಯಡಿ ಸಾಲ-ಸೌಲಭ್ಯವನ್ನು ಪಡೆಯಲು ಇಚ್ಛಿಸುವವರು ಕಡ್ಡಾಯವಾಗಿ ಆನ್‌ಲೈನ್ ವಿಳಾಸ kacdc.karnataka.gov.in ರ ಮೂಲಕ ಅರ್ಜಿ ಸಲ್ಲಿಸಬೇಕಾಗಿದೆ. ಅರ್ಜಿಸಲ್ಲಿಸಲು ಕೊನೆಯ ದಿ: 31.10.2025.

**ಅರಿವು ಶೈಕ್ಷಣಿಕ ಸಾಲ ಯೋಜನೆ ಅರ್ಹತೆಗಳು**

ಈ ಯೋಜನೆಯಲ್ಲಿ ಸಿ.ಇ.ಟಿ. ಎನ್.ಇ.ಇ.ಟಿ ಪ್ರವೇಶ ಪರೀಕ್ಷೆಯಲ್ಲಿ ಉತ್ತೀರ್ಣರಾಗಿ ವೃತ್ತಿಪರ ಕೋರ್ಸ್‌ಗೂ ಪಿ.ಹೆಚ್.ಡಿನಲ್ಲಿ ವ್ಯಾಸಂಗ ಮಾಡುವ ಆರ್ಯ ವೈಶ್ಯ ವಿದ್ಯಾರ್ಥಿಗಳಿಗೆ ವಾರ್ಷಿಕ ರೂ.1,00,000/-ಗಳ ಸಾಲವನ್ನು ಶೇ.2 ರ ಬಡ್ಡಿದರದಲ್ಲಿ ಶೈಕ್ಷಣಿಕ ಸಾಲ ನೀಡಲಾಗುವುದು.

ವ್ಯಾಸಂಗ ಪೂರ್ಣಗೊಂಡ ನಂತರ 04 ತಿಂಗಳ ವಿರಾಮಾವಧಿ ಇರುತ್ತದೆ. ನಂತರ ಸಾಲವನ್ನು 36 ಮಾಸಿಕ ಕಂತುಗಳಲ್ಲಿ ಮರು ಪಾವತಿಸಬೇಕು. ಅರ್ಜಿದಾರರು 18 ವರ್ಷ ಮೇಲ್ಪಟ್ಟು 35 ವರ್ಷದ ಒಳಗಿನವರಾಗಿರಬೇಕು. ಅರ್ಜಿದಾರರ ಕುಟುಂಬದ ವಾರ್ಷಿಕ ವರಮಾನ ಗ್ರಾಮಾಂತರ ಮತ್ತು ನಗರ ಪ್ರದೇಶದವರಿಗೆ ರೂ.6,00,000/-ಗಳ ಮಿತಿಯೊಳಗಿರಬೇಕು.

**ಅರ್ಜಿಸಲ್ಲಿಸಲು ಇರಬೇಕಾದ ಸಾಮಾನ್ಯ ಅರ್ಹತೆಗಳು**

ಸಾಮಾನ್ಯ ವರ್ಗದಲ್ಲಿ ಆರ್ಯ ವೈಶ್ಯ ಸಮುದಾಯಕ್ಕೆ ಸೇರಿರಬೇಕು, ಜಾತಿ ಮತ್ತು ಆದಾಯ ಪ್ರಮಾಣ ಪತ್ರ ನಮೂನೆ-ಜಿಯಲ್ಲಿ ಪಡೆದಿರಬೇಕು. ಪ್ರಮಾಣ ಪತ್ರವು ಚಾಲ್ತಿಯಲ್ಲಿರಬೇಕು, ಅರ್ಜಿದಾರರು ಕರ್ನಾಟಕ ರಾಜ್ಯದವರಾಗಿರಬೇಕು ಹಾಗೂ ಅವರ ಖಾಯಂ ವಿಳಾಸವು ಕರ್ನಾಟಕ ರಾಜ್ಯದಲ್ಲಿರಬೇಕು, ಅರ್ಜಿದಾರರು ತಮ್ಮ ಆಧಾರ್ ಸಂಖ್ಯೆಗೆ ತಮ್ಮ ಮೊಬೈಲ್ ಸಂಖ್ಯೆಯನ್ನು ಜೋಡಣೆ ಹಾಗೂ ತಮ್ಮ ಬ್ಯಾಂಕ ಖಾತೆಗೆ ಆಧಾರ್ ಸಂಖ್ಯೆಯನ್ನು ಸೀಡಿಂಗ ಮಾಡಿಸಿರಬೇಕು.

ಆಯ್ಕೆ ಮಾಡುವಾಗ ಮಹಿಳೆಯರಿಗೆ ಶೇ.33% ಹಾಗೂ ವಿಕಲಚೇತನರಿಗೆ ಶೇ.5% ಮೀಸಲಾತಿ ಇರಿಸಿದೆ. ಒಂದು ಕುಟುಂಬದಲ್ಲಿ ಇಬ್ಬರು ಮಾತ್ರ ಸಾಲ ಸೌಲಭ್ಯ ಪಡೆಯಲು ಅರ್ಹರಾಗಿರುತ್ತಾರೆ.

ಮೇಲ್ಕಾಣಿಸಿದ ಯೋಜನೆಗಳ ಮಾರ್ಗಸೂಚಿ ಹಾಗೂ ಅರ್ಹತೆಗಳ ಸಂಕ್ಷಿಪ್ತ ವಿವರಗಳನ್ನು ಕೋಡ್ ಅನ್ನು ಸ್ಕ್ಯಾನ್ ಮಾಡಿ ಪಡೆಯಬಹುದಾಗಿದೆ. ಸಂಪರ್ಕ ವಿವರ ನಿಗಮದ ಸಹಾಯವಾಣಿ: 9448451111 ಬೆಳಿಗ್ಗೆ:10.00ರಿಂದ ಸಂಜೆ:5.30 ವರೆಗೆ ಸಂಪರ್ಕಿಸಬಹುದಾಗಿದೆ ಎಂದು ತಿಳಿಸಿದ್ದಾರೆ.

# ವಿದ್ಯಾರ್ಥಿಗಳಿಗೆ ಲೇಖನ ಬರವಣಿಗೆ ಸ್ಪರ್ಧೆ ಬಹುಮಾನ ವಿತರಣೆ



■ ವಿಜಯಸಾಕ್ಷಿ ಸುದ್ದಿ, ಗದಗ

ಕ್ಷೇತ್ರ ಶಿಕ್ಷಣಾಧಿಕಾರಿಗಳ ಹಾಗೂ ಕ್ಷೇತ್ರ ಸಮನ್ವಯಾಧಿಕಾರಿಗಳ ಕಾರ್ಯಾಲಯ, ಎಂ.ಜಿ. ಚಾರಿಟೇಬಲ್ ಟ್ರಸ್ಟ್ ಗದಗ ಇವರ ಸಹಯೋಗದಲ್ಲಿ ಗದಗ ಶಹರ ವಲಯದ ಸರ್ಕಾರಿ ಶಾಲೆಗಳಲ್ಲಿ ಅಧ್ಯಯನ ಮಾಡುತ್ತಿರುವ 6ನೇ ತರಗತಿಯ ವಿದ್ಯಾರ್ಥಿಗಳಿಗೆ ಕನ್ನಡ, ಇಂಗ್ಲಿಷ್, ಹಿಂದಿ/ಉರ್ದು ಭಾಷೆಗಳಲ್ಲಿ ಲೇಖನ ಬರವಣಿಗೆ ಸ್ಪರ್ಧೆ ಆಯೋಜಿಸಲಾಗಿತ್ತು.

ನೂರಾನಿ ಚಾರಿಟೇಬಲ್ ಟ್ರಸ್ಟ್‌ನ ಅಧ್ಯಕ್ಷ ಡಾ. ಪಿ.ಕೆ. ನೂರಾನಿ ವಿದ್ಯಾರ್ಥಿಗಳಿಗೆ ಶುಭ ಕೋರಿದರು. ಯುವ ಮುಖಂಡ ಖಾಲಿದ್ ಕೊಪ್ಪಳ ಮಾತನಾಡಿ, ಯಾವ ಮಗುವಿನ ಬರವಣಿಗೆ ಉತ್ತಮವಾಗಿರುತ್ತದೆಂಯೋ ಅವನು ಮುಂದೆ ಓದಿನಲ್ಲಿ ಆಸಕ್ತಿ ಪಡೆಯುತ್ತಾನೆ ಎಂದರು.


ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಗದಗ ತಾಲೂಕಿನ ಪ್ರಧಾನಮಂತ್ರಿ ಪೋಷಣ ಅಭಿಯಾನದ ಸಹಾಯಕ ನಿರ್ದೇಶಕ ಶಂಕರ ಹಡಗಲಿ, ವಿದ್ಯಾರ್ಥಿಗಳಲ್ಲಿ ಬರವಣಿಗೆ ಕೌಶಲ್ಯ ಹೆಚ್ಚಿಸುವ ಉದ್ದೇಶದಿಂದ ವಿದ್ಯಾರ್ಥಿಗಳಲ್ಲಿ ಓದು-ಬರಹ ಅಭಿರುಚಿ ಹೆಚ್ಚಾಗಬೇಕು. ಇಲಾಖೆಯೊಂದಿಗೆ ಸೇರಿ ಇಂತಹ ಅತ್ಯುತ್ತಮ ಕಾರ್ಯಕ್ರಮ ಮಾಡುತ್ತಿರುವುದು ಸಂತಸದ ವಿಷಯ ಎಂದರು.

ಶಹರ ವಲಯದ ಬಿಆರ್‌ಪಿ ಎಂ.ಎ. ಯರಗುಡಿ, ಎಸ್.ಎನ್. ಬಳ್ಳಾರಿ, ದಿವ್ಯ ಸಾನ್ನಿಧ್ಯ ವಹಿಸಿದ್ದ ಎಂ.ಜಿ. ಚಾರಿಟೇಬಲ್ ಟ್ರಸ್ಟ್‌ನ ಕಾರ್ಯದರ್ಶಿ ಮೌಲಾನ ಅಬ್ದುಲ ಗಫೂರ್, ತಾ.ಪಂ ಯೋಜನಾಧಿಕಾರಿ ಜಿ.ಬಿ. ಕಿಲಬನವರ, ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ವಿ. ಶೆಟ್ಟಪ್ಪನವರ ಮಾತನಾಡಿದರು.

ಈ ಸಂದರ್ಭದಲ್ಲಿ ದೀಪ ಎಂ.ಮೇಟಿ, ಶ್ವೇತಾ ಅಂಜಿಖಾನೆ, ಅಥರ್ ತಡಸದ, ಶಾಹಿನ ಕೊಪ್ಪಳ, ಅರ್ಷಿಯಾ ಫಣಿಬಂದ, ಸೋಫಿಯಾ ನದಾಫ್, ಐಮನ್ ಗುಜಮಾಗಡಿ ಮುಂತಾದ ವಿದ್ಯಾರ್ಥಿಗಳಿಗೆ ನಗದು ಬಹುಮಾನದೊಂದಿಗೆ ಪ್ರಶಸ್ತಿಪತ್ರ ಹಾಗೂ ನೆನಪಿನ ಕಾಣಿಕೆ ನೀಡಿ ಗೌರವಿಸಲಾಯಿತು. ಗದಗ ಶಹರ ವಲಯದ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಸಂಗಮೇಶ ಮಂಗಳಗುಡ್ಡ, ಕಾರ್ಯದರ್ಶಿ ಕನಾಜ, ಖಜಾಂಚಿ ರಶೀದ, ಅಬ್ದುಲ್ ಕಲಾಂ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಅಹಮದ್ ಖಾಜಿ, ಬೋದ್ಲೆಖಾನ್, ಸಿಆರ್‌ಪಿಗಳು, ಶಾಲೆಯ ಮುಖ್ಯೋಪಾಧ್ಯಾಯ ನಮಾಜಿ ಸೇರಿದಂತೆ ಶಿಕ್ಷಕ ವೃಂದದವರು ಟ್ರಸ್ಟ್‌ನ ಸ್ವಯಂಸೇವಕರು ಉಪಸ್ಥಿತರಿದ್ದರು.

## ಮಹಿಳೆಯರೇ ಎಳೆಯುವ 165 ಕೆಜಿ ತೂಕದ ಬೆಳ್ಳಿ ರಥ

# ಆ. 4ರಂದು ಹಾಲಕೆರೆಯಲ್ಲಿ ಬೆಳ್ಳಿ ರಥೋತ್ಸವ







ಗದುಗಿನ ಎಸ್.ಎಸ್. ಸಾರಂಗಮಠ ವಿರಚಿತ ನಾಟಕ 'ಹಾಲಕೆರೆಯ ಶ್ರೀ ಮಹಾತಪಸ್ವಿ ಅನ್ನದಾನೇಶ್ವರ ಮಹಿಮೆ', ಲಿಂಗಸಗೂರಿನ ಗಿರಿರಾಜ ಹೊಸಮನಿ ವಿರಚಿತ 'ಹಾಲಕೆರೆಯಿಂದ ಹಿಮಾಲಯದವರೆಗೆ ಶ್ರೀ ಹಿರಿಯ ಅನ್ನದಾನ ಸ್ವಾಮೀಜಿಗಳ ಚರಿತಾಮೃತ' ಕೃತಿಗಳು ಬಿಡುಗಡೆಯಾಗಲಿವೆ. ಲೀಲಾ ಕಾರಟಗಿ ಮಕ್ಕಳ ಸಮಗ್ರ ಬೆಳವಣಿಗೆಯಲ್ಲಿ ಮಹಿಳೆಯ ಪಾತ್ರ ಕುರಿತು ಉಪನ್ಯಾಸ ನೀಡುವರು. ರೋಣದ ಅನ್ನಪೂರ್ಣ ಪಾಟೀಲ, ಗಜೇಂದ್ರಗಡದ ಸಂಯುಕ್ತ ಬಂಡಿ ಸೇರಿದಂತೆ ಇತರರು ಆಗಮಿಸಲಿದ್ದಾರೆ.

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಮೀಪದ ಹಾಲಕೆರೆಯ ಶ್ರೀ ಅನ್ನದಾನೇಶ್ವರ ಸಂಸ್ಥಾನ ಮಠದಲ್ಲಿ ಆಗಸ್ಟ್ 4ರಂದು ಬೆಳ್ಳಿ ರಥೋತ್ಸವ ಜರುಗಲಿದೆ. ಪ್ರತಿವರ್ಷ ಶ್ರಾವಣ ಮಾಸದ 2ನೇ ಸೋಮವಾರ ಮಹಿಳೆಯರೇ ಬೆಳ್ಳಿ ರಥ ಎಳೆಯುವುದು ವಿಶೇಷವಾಗಿದೆ.

ತೇರು ಎಳೆಯವುದು ಮತ್ತು ಧಾರ್ಮಿಕ ಕ್ಷೇತ್ರದಲ್ಲಿ ಮಹಿಳೆಯರಿಗೂ ಪ್ರಾತಿನಿಧ್ಯ ನೀಡುವ ಉದ್ದೇಶದಿಂದ ಲಿಂ. ಗುರು ಅನ್ನದಾನ ಶಿವಯೋಗಿಗಳವರ ಪುಣ್ಯಸ್ಮರಣೋತ್ಸವದ ನಿಮಿತ್ತ ಲಿಂ. ಡಾ. ಅಭಿನವ ಅನ್ನದಾನ ಸ್ವಾಮೀಜಿಗಳು 2005ರಲ್ಲಿ 165 ಕೆಜಿ ತೂಕದ ಬೆಳ್ಳಿ ರಥ ನಿರ್ಮಿಸಿದರು. ಕಳೆದ 20 ವರ್ಷಗಳಿಂದ ಮಹಿಳೆಯರು ಬೆಳ್ಳಿ ತೇರು ಎಳೆಯುತ್ತಿದ್ದಾರೆ. ಈ ತೇರಿಗೆ ಹೂವನ್ನು ಮಾತ್ರ ಎಸೆಯಲಾಗುತ್ತದೆ. ರಥೋತ್ಸವದಲ್ಲಿ ನಾಡಿನ ಸುತ್ತಲಿನ ಜಿಲ್ಲೆಗಳ ಮಹಿಳೆಯರೂ ಅತ್ಯಂತ ಉತ್ಸಾಹದಿಂದ ಪಾಲ್ಗೊಳ್ಳುತ್ತಾರೆ.

ಆಗಸ್ಟ್ 3ರಂದು ಬೆಳಿಗ್ಗೆ 10 ಗಂಟೆಗೆ ನಿಡಗುಂದಿಕೊಪ್ಪ ಶಾಖಾ ಶಿವಯೋಗಮಂದಿರದ ಅಭಿನವ ಚನ್ನಬಸವ ಸ್ವಾಮೀಜಿಗಳವರಿಂದ ಷಟಸ್ಥಲ ಧ್ವಜಾರೋಹಣ, ಮಧ್ಯಾಹ್ನ 12 ಗಂಟೆಗೆ ಮಹಾಗಣಾರಾಧನೆ, ಸಂಜೆ 7 ಗಂಟೆಗೆ ಪುಣ್ಯಸ್ಮರಣೋತ್ಸವ ಮತ್ತು ಆಧ್ಯಾತ್ಮ ಪ್ರವಚನ ಮಂಗಲೋತ್ಸವ ಜರುಗಲಿದ್ದು, ನಂದವಾಡಗಿ ಶ್ರೀ ಮಹಾಂತೇಶ್ವರ ಹಿರೇಮಠದ ಮಹಾಂತಲಿಂಗ ಶಿವಾಚಾರ್ಯ ಸ್ವಾಮೀಜಿ ಸಾನ್ನಿಧ್ಯ ವಹಿಸುವರು. ನರೇಗಲ್ಲ ಹಿರೇಮಠದ ಮಲ್ಲಿಕಾರ್ಜುನ ಶಿವಾಚಾರ್ಯರು ಅಧ್ಯಕ್ಷತೆ ವಹಿಸುವರು. ಧರ್ಮ ಸಭೆಯಲ್ಲಿ ನಾಡಿನ ಹರ-ಗುರು-ಚರ ಮೂರ್ತಿಗಳು ಭಾಗವಹಿಸಲಿದ್ದಾರೆ. ಶಾಸಕ ಜಿ.ಎಸ್. ಪಾಟೀಲ, ಮಾಜಿ ಸಚಿವ ಕಳಕಪ್ಪ ಬಂಡಿ, ಗ್ರಾ.ಪಂ ಅಧ್ಯಕ್ಷ ಗಿರೀಶಗೌಡ ಮುಲ್ಕಿಪಾಟೀಲ ಪಾಲ್ಗೊಳ್ಳಲಿದ್ದಾರೆ.

ಆಗಸ್ಟ್ 4ರಂದು ಬೆಳಿಗ್ಗೆ 8.30ಕ್ಕೆ ಶ್ರೀ ಮುಪ್ಪಿನಬಸವಲಿಂಗ ಸ್ವಾಮೀಜಿಯವರಿಂದ ಮಕ್ಕಳಿಗಾಗಿ ವಿದ್ಯಾರಂಭ ಜರುಗಲಿದೆ. ಬೆಳಗ್ಗೆ 10ರಿಂದ ಸಂಜೆ 5 ಗಂಟೆಯವರೆಗೆ ಧಾರವಾಡ ಎಸ್‌ಡಿಎಂ ನಾರಾಯಣ ಹಾರ್ಟ್ ಸೆಂಟರ್‌ವತಿಯಿಂದ ಉಚಿತ ಹೃದಯ ರೋಗ ತಪಾಸಣೆ ಶಿಬಿರ ಜರುಗಲಿದೆ. ಬೆಳಿಗ್ಗೆ 11 ಗಂಟೆಗೆ 501 ಮುತ್ತೈದೆಯರ ಉಡಿ ತುಂಬುವ ಸಮಾರಂಭ, ಮರಳಿ ಮಣ್ಣಿಗೆ ಜನಜಾಗೃತಿ ಅಭಿಯಾನಕ್ಕೆ ಪ್ರಗತಿಪರ ರೈತ ಮಹಿಳೆ ಸುನಂದಮ್ಮ ಗದ್ದಿಕೇರಿ ಚಾಲನೆ ನೀಡುವರು.

ಸಂಜೆ 5 ಗಂಟೆಗೆ ಬೆಳ್ಳಿ ರಥೋತ್ಸವವು ಸಾವಿರಾರು ಮಹಿಳೆಯರ ಸಮ್ಮುಖದಲ್ಲಿ ಜರುಗಲಿದ್ದು, ಧಾರವಾಡದ ಜಿಲ್ಲಾಧಿಕಾರಿ ದಿವ್ಯ ಪ್ರಭು ಚಾಲನೆ ನೀಡುವರು. ಬೆತ್ತದ ಅಜ್ಜ ಕಿರುಚಿತ್ರದ ಲೋಕಾರ್ಪಣೆ ಜರುಗಲಿದೆ. ಸಂಜೆ 6 ಗಂಟೆಗೆ ಶಿವಾನುಭವಗೋಷ್ಠಿ ಜರುಗಲಿದ್ದು, ವಳಬಳ್ಳಾರಿ ಸುವರ್ಣಗಿರಿ ವಿರಕ್ತಮಠದ ಸಿದ್ದಲಿಂಗ ಸ್ವಾಮೀಜಿ ಸಾನ್ನಿಧ್ಯ, ಸಂತೆಕಲ್ಲೂರ ಘನಮಠೇಶ್ವರಮಠದ ಗುರುಬಸವ ಸ್ವಾಮೀಜಿ ನೇತೃತ್ವ ವಹಿಸುವರು.

ಇದೇ ಸಂದರ್ಭದಲ್ಲಿ ಹಿರಿಯ ತಾಯಂದಿರ ಸನ್ಮಾನ ಜರುಗಲಿದೆ. ಅಂಗ ಸಂಸ್ಥೆಯ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ ಎಂದು ಶ್ರೀಮಠದ ಪ್ರಕಟಣೆ ತಿಳಿಸಿದೆ.

# ರಸಗೊಬ್ಬರಗಳ ದಾಸ್ತಾನು ಮಾಹಿತಿ

■ ವಿಜಯಸಾಕ್ಷಿ ಸುದ್ದಿ, ಗದಗ

2025-26ನೇ ಸಾಲಿನ ಮುಂಗಾರು ಹಂಗಾಮಿಗೆ ಗದಗ ಜಿಲ್ಲೆಗೆ ಜುಲೈ 2025ರ ಅಂತ್ಯಕ್ಕೆ 17778 ಮೆ.ಟನ್ ಯೂರಿಯಾ ರಸಗೊಬ್ಬರದ ಬೇಡಿಕೆ ಇದ್ದು, ಇಲ್ಲಿಯವರೆಗೆ ಜಿಲ್ಲೆಗೆ 21895 ಮೆ.ಟನ್ ಯೂರಿಯಾ ಪೂರೈಸಲಾಗಿದೆ. ಪ್ರಸ್ತುತ 1720 ಮೆ.ಟನ್ ಯೂರಿಯಾ ರಸಗೊಬ್ಬರವು ಜಿಲ್ಲೆಯ ವಿವಿಧ ರಸಗೊಬ್ಬರ ಮಾರಾಟ ಮಳಿಗೆಗಳಲ್ಲಿ ದಾಸ್ತಾನು ಇದೆ. ಆ.2ರಂದು ಸ್ಪಿಕ್ ಸಂಸ್ಥೆಯ 300 ಮೆ.ಟನ್ ಯೂರಿಯಾ ರಸಗೊಬ್ಬರ ಪೂರೈಕೆಯಾಗಲಿದೆ.

ಸಗಟು ಮತ್ತು ಚಿಲ್ಲರೆ ರಸಗೊಬ್ಬರ ಮಾರಾಟಗಾರರು, ಪ್ರಾಥಮಿಕ ಕೃಷಿ ಪತ್ತಿನ ಸಂಘಗಳು, ಎಫ್.ಪಿ.ಓಗಳು ರಸಗೊಬ್ಬರಗಳನ್ನು ಪಾಯಿಂಟ್ ಆಫ್ ಸೇಲ್ ಮೂಲಕವೇ ಮಾರಾಟ ಮಾಡವುದು, ರೈತರಿಗೆ ಬಿಲ್ಲುಗಳನ್ನು ನೀಡುವುದು, ನಿಗದಿತ ದರಗಳಲ್ಲಿ ಮಾರಾಟ ಮಾಡುವುದು ಕಡ್ಡಾಯವಾಗಿದೆ. ಹೆಚ್ಚಿನ ದರದಲ್ಲಿ ಮಾರಾಟ ಮಾಡುವುದು, ಪಾಯಿಂಟ್ ಆಫ್ ಸೇಲ್‌ನಲ್ಲಿ ಬಾಕಿ ಇರುವುದು ಮತ್ತು ರೈತರಿಗೆ ಬಿಲ್ ನೀಡದಿರುವ ಬಗ್ಗೆ ರೈತರಿಂದ ದೂರುಗಳು ಬಂದಲ್ಲಿ ಅಂತಹ ರಸಗೊಬ್ಬರ ಮಾರಾಟಗಾರರ ವಿರುದ್ಧ ಫರ್ಟಿಲೈಜರ್ ಕಂಟ್ರೋಲ್ ಆರ್ಡರ್ (ಎಫ್‌ಸಿಓ) 1985ರನ್ವಯ ಕಾನೂನು ಕ್ರಮ ಜರುಗಿಸಲಾಗುವುದೆಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆ.4ರಿಂದ ದಾನಮ್ಮ ದೇವಿ ಪುರಾಣ ಆರಂಭ

■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಇಲ್ಲಿಯ ಅನ್ನದಾನೀಶ್ವರ ಶಾಖಾ ಮಠದಲ್ಲಿ ಶ್ರಾವಣ ಮಾಸದಂಗವಾಗಿ ಆಗಸ್ಟ್ 4ರಿಂದ ಗುಡ್ಡಾಪೂರ ದಾನಮ್ಮದೇವಿಯ ಪುರಾಣ ಕಾರ್ಯಕ್ರಮ ಆರಂಭವಾಗಲಿದೆ.

ಸಂಜೆ 8ಕ್ಕೆ ಪುರಾಣ ಕಾರ್ಯಕ್ರಮದ ಸಾನ್ನಿಧ್ಯ ವಹಿಸಲಿರುವ ಮುಂಡರಗಿಯ ಅನ್ನದಾನೀಶ್ವರ ಮಠದ ನಾಡೋಜ ಡಾ. ಅನ್ನದಾನೀಶ್ವರ ಸ್ವಾಮೀಜಿಗಳು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. ಹರ್ಲಾಪೂರದ ಡಾ. ಕೊಟ್ಟೂರೇಶ್ವರ ಸ್ವಾಮೀಜಿ, ಕುಕನೂರಿನ ಡಾ. ಮಹಾದೇವ ಸ್ವಾಮೀಜಿ ಉಪಸ್ಥಿತರಿರುವರು. ಶಂಕ್ರಯ್ಯ ಹಿರೇಮಠ ಅಧ್ಯಕ್ಷತೆ ವಹಿಸುವರು.

ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ, ಉಪಾಧ್ಯಕ್ಷೆ ಪುಷ್ಪಾ ಪಾಟೀಲ ಸೇರಿದಂತೆ ಗ್ರಾ.ಪಂ ಸದಸ್ಯರು, ವಿವಿಧ ಗಣ್ಯರು ಭಾಗವಹಿಸಲಿದ್ದಾರೆ. ಗದುಗಿನ ಡಾ. ಗಿರಿಜಾ ಹಸಬಿ ಪುರಾಣ ಪಠಣ ಮಾಡುವರು. ಷಡಕ್ಷರಯ್ಯ ಬದ್ನಿಮಠ, ಬಸನಗೌಡ ಪಾಟೀಲ ಸಂಗೀತ ಸೇವೆ ನೀಡುವರು ಎಂದು ಅನ್ನದಾನೀಶ್ವರ ಸೇವಾ ಸಮಿತಿಯ ಅಧ್ಯಕ್ಷ ಅಂದಾನಯ್ಯ ಮುನವಳ್ಳಿಮಠ ತಿಳಿಸಿದ್ದಾರೆ.

## ಮಹಮ್ಮದ್ ಶಾ ನದಾಫ್ ಅವರಿಗೆ ಪಿಎಚ್‌ಡಿ ಪದವಿ

■ ವಿಜಯಸಾಕ್ಷಿ ಸುದ್ದಿ, ಗದಗ



ತಾಲೂಕಿನ ನರಸಾಪುರದ ಮಹಮ್ಮದ್ ಶಾ ನದಾಫ್ ಅವರು ದಿ. 1-8-2025ರಂದು ತಮಿಳುನಾಡಿನ ಭಾರತಿದಾಸನ್ ವಿಶ್ವ ವಿದ್ಯಾಲಯ ತಿರುಚಾನಪಲ್ಲಿಯ ಸಮಾಜಕಾರ್ಯ ವಿಭಾಗದಿಂದ ಪಿ ಎಚ್ ಡಿ ಪದವಿ ಪಡೆದಿದ್ದಾರೆ. "ವೃದ್ಧರ ಮಾನಸಿಕ ಆರೋಗ್ಯದಲ್ಲಿ ಸಾಮಾಜಿಕ ಸಂಬಂಧಗಳು ಹಾಗೂ ಸಾಮಾಜಿಕ ಎರವಲುಗಳ ಪಾತ್ರ "("Social Network, Social Support and Mental Health among Older Persons") ಎಂಬ ವಿಷಯದ ಮೇಲೆ ಪ್ರೊ ॥ ಜೆ ಓ ಜರೀಡಾ ಜ್ಞಾನಜಾನೆ ಎಲ್ಲೊ ಅವರ ಮಾರ್ಗದರ್ಶನದಲ್ಲಿ ಮಹಮ್ಮದ್ ಶಾ ಅಧ್ಯಯನ ಮಾಡಿದ್ದರು. ಸದ್ಯ ಅವರು ಧಾರವಾಡ ವಿಶ್ವವಿದ್ಯಾಲಯದ ಸಮಾಜ ಕಾರ್ಯ ವಿಭಾಗದಲ್ಲಿ ಉಪನ್ಯಾಸಕರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಅವರ ಈ ಸಾಧನೆಗೆ ಧಾರವಾಡ ವಿ ವಿ ಯ ಸಮಾಜ ಕಾರ್ಯ ವಿಭಾಗ, ಅವರ ವಿದ್ಯಾರ್ಥಿಗಳು, ಸ್ನೇಹಿತರು, ಹಿತೈಷಿಗಳು, ನವಜ್ಯೋತಿ ಸೇವಾ ಸಂಸ್ಥೆ ನಾಗಾವಿ ಹಾಗೂ ಕುಟುಂಬಸ್ಥರು ಅಭಿನಂದಿಸಿದ್ದಾರೆ.

## ಗ್ರಾಮ ಒನ್ ಕೇಂದ್ರಕ್ಕೆ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಶಿರಹಟ್ಟಿ ತಾಲೂಕಿನಲ್ಲಿ ಖಾಲಿ ಇರುವ ಮಜ್ಜೂರು ಗ್ರಾಮ ಪಂಚಾಯತಿಯ ಗ್ರಾಮ ಒನ್ ಕೇಂದ್ರಕ್ಕೆ ಆನ್ ಲೈನ್ ನಲ್ಲಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದ್ದು, ಆಸಕ್ತ ಅಭ್ಯರ್ಥಿಗಳು ದಿ. 15-08-2025 ರೊಳಗಾಗಿ ಅರ್ಜಿಗಳನ್ನು https://www.karnatakaone.gov.in/Public/GramOneF ranchiseeTerms ನಲ್ಲಿ ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ ಎಂದು ಗದಗ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### 2756ನೇ ಶಿವಾನುಭವ ಕಾರ್ಯಕ್ರಮದಲ್ಲಿ ಡಾ. ತೋಂಟದ ಸಿದ್ದರಾಮ ಮಹಾಸ್ವಾಮಿಗಳು

# ಬಸವಾದಿ ಶರಣರು ಸಮಾಜದ ಅಂಧಕಾರ ಅಳಿಸಿದರು

■ ವಿಜಯಸಾಕ್ಷಿ ಸುದ್ದಿ, ಗದಗ

ಇಂದು ಪ್ರಜಾಪ್ರಭುತ್ವ ವ್ಯವಸ್ಥೆಯಿದೆ. ಆದರೆ ಅಂದು ಪ್ರಭುತ್ವ ವ್ಯವಸ್ಥೆಯ ಮಧ್ಯದಲ್ಲಿಯೂ ಬಸವಣ್ಣನವರು, ಕಲ್ಲನಾಗರ ಕಂಡರೆ ಹಾಲನೆರೆಯೆಂಬರು, ದಿಟದ ನಾಗರ ಕಂಡರೆ ಕೊಲ್ಲೆಂಬರಯ್ಯ ಎಂಬ ವಚನದ ಮೂಲಕ ಸಮಾಜದಲ್ಲಿನ ಅಂಧಕಾರವನ್ನು ಅಳಿಸಿ ಹೊಸ ಬೆಳಕು ಕೊಟ್ಟವರು ಎಂದು ಡಾ. ತೋಂಟದ ಸಿದ್ಧರಾಮ ಸ್ವಾಮಿಗಳು ನುಡಿದರು.



ಲಿಂಗಾಯತ ಪ್ರಗತಿಶೀಲ ಸಂಘದ 2756ನೇ ಶಿವಾನುಭವದ ಸಾನ್ನಿಧ್ಯ ವಹಿಸಿ ಮಾತನಾಡಿದ ಶ್ರೀಗಳು, ವೈಜ್ಞಾನಿಕ ಯುಗದಲ್ಲಿಯೂ ಮೌಢ್ಯಗಳನ್ನು ಆಚರಣೆ ಮಾಡುವ ಪದ್ಧತಿಯನ್ನು ಕಾಣುತ್ತೇವೆ. ಸಮಾಜದಲ್ಲಿನ ಅಜ್ಞಾನ, ಮೂಢನಂಬಿಕೆ ಹೊಡೆದೊಡಿಸಬೇಕೆಂದು ಬಸವಾದಿ ಶಿವಶರಣರು ವಚನಗಳ ಮೂಲಕ ತಿಳಿಸಿಕೊಟ್ಟಿದ್ದಾರೆ. ಆ ಪಾಲು ಈ ಪಾಲು ಎನ್ನುತ್ತಾ ಕಲ್ಲನಾಗರಕ್ಕೆ ಹಾಲೆರೆದು ಮಣ್ಣುಪಾಲು ಮಾಡುತ್ತಾರೆ. ಬಡವರಿಗೆ, ರೋಗಿಗಳಿಗೆ, ನಿರ್ಗತಿಕರಿಗೆ ಕೊಟ್ಟರೆ ಸಾರ್ಥಕವಾಗುತ್ತದೆ ಎಂದು ಶ್ರೀಗಳು ಹೇಳಿದರು.

ಪೂಜ್ಯ ಶ್ರೀ ವಿಜಯಮಹಾಂತದೇವರು ಹಿರೇಮಠ ಅವರು ಶ್ರಾವಣ ಮಾಸದ ನಿಮಿತ್ತ ವಚನ ಚಿಂತನದ ಪ್ರವಚನ ಮಾಡಿದರು. ತೋಂಟದಾರ್ಯ ಜಾತ್ರಾ ಮಹೋತ್ಸವ ಸಮಿತಿ-2025ರ ಅಧ್ಯಕ್ಷ ಡಾ. ಧನೇಶ್ ದೇಸಾಯಿ, ಉಪಾಧ್ಯಕ್ಷರಾದ ಶೈಲಾ ಕೋಟೆಕಲ್ಲ, ಕಾರ್ಯದರ್ಶಿ ಶಿವಣ್ಣ ಕತ್ತಿ, ಸಿದ್ದರಾಮಪ್ಪ ಗೊಜನೂರ ಉಪಸ್ಥಿತರಿದ್ದರು.

ವಚನ ಸಂಗೀತ ಗುರುನಾಥ್ ಸುತಾರ ಹಾಗೂ ರೇವಣಸಿದ್ದೇಶ್ವರ ಮಂಟೂರಮಠ ನಡೆಸಿಕೊಟ್ಟರು. ಧರ್ಮಗ್ರಂಥ ಪಠಣವನ್ನು ಪೂರ್ವಿ ಸಿ. ಮಂಟೂರಮಠ ಹಾಗೂ ವಚನ ಚಿಂತನವನ್ನು ಭೂಮಿಕಾ ಎಸ್.ಹೊಸಳ್ಳಿಮಠ ಮಂಡಿಸಿದರು. ದಾಸೋಹ ಸೇವೆಯನ್ನು ರಾಜೇಶ್ ಈಶ್ವರಪ್ಪ ಮಾನ್ವಿ ವಹಿಸಿಕೊಂಡಿದ್ದರು.

ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಬಾಲಚಂದ್ರ ಭರಮಗೌಡ್ರ, ಉಪಾಧ್ಯಕ್ಷ ಡಾ. ಉಮೇಶ ಪುರದ ಹಾಗೂ ವಿದ್ಯಾ ಪ್ರಭು ಗಂಜಿಹಾಳ, ಕಾರ್ಯದರ್ಶಿ ವೀರಣ್ಣ ಗೋಟಡಕಿ, ಸಹ ಕಾರ್ಯದರ್ಶಿ ಸೋಮನಾಥ ಪುರಾಣಿಕ, ನಾಗರಾಜ್ ಹಿರೇಮಠ, ಸಂಘಟನಾ ಕಾರ್ಯದರ್ಶಿ ಮಹೇಶ್ ಗಾಣಿಗೇರ, ಕೋಶಾಧ್ಯಕ್ಷ ಬಸವರಾಜ ಕಾಡಪ್ಪನವರ, ಶಿವಾನುಭವ ಸಮಿತಿಯ ಸಹ ಚೇರಮನ್ ಶಿವಾನಂದ ಹೊಂಬಳ ಹಾಗೂ ಶ್ರೀಮಠದ ಭಕ್ತರು ಉಪಸ್ಥಿತರಿದ್ದರು.

ಶಿವಾನುಭವ ಸಮಿತಿಯ ಚೇರಮನ್ ಐ.ಬಿ. ಬೆನಕೊಪ್ಪ ಸ್ವಾಗತಿಸಿದರು. ವಿದ್ಯಾ ಪ್ರಭು ಗಂಜಿಹಾಳ ಕಾರ್ಯಕ್ರಮ ನಿರೂಪಿಸಿದರು.

ಉಪನ್ಯಾಸಕರಾಗಿ ಆಗಮಿಸಿದ ಲಕ್ಷ್ಮೇಶ್ವರದ ಸರ್ಕಾರಿ ಪದವಿಪೂರ್ವ ಕಾಲೇಜಿನ ಡಾ. ಬಿ.ಎಂ. ಮರಳಿಹಳ್ಳಿ ಮಾತನಾಡಿ, ಮೌಢ್ಯಗಳನ್ನು ವಿರೋಧಿಸುವ ವಚನಗಳು ಇಂದಿಗೂ ಪ್ರಸ್ತುತ. ಹಾವಾಡಿಗ, ಬೆಕ್ಕು, ಮೂಕೊರತಿ ಎದುರಿಗೆ ಬಂದರೆ ಅಪಶಕುನ ಎನ್ನುವ ಸಮಾಜಕ್ಕೆ ಬಸವಣ್ಣನವರು ವಚನಗಳ ಮೂಲಕ ತಕ್ಕ ಉತ್ತರ ಕೊಟ್ಟಿದ್ದಾರೆ. ಅನುಭವಕ್ಕೆ ವಿಘ್ನಗಳಿಲ್ಲ. ಆತ್ಮ ಕೇಂದ್ರಿತ ಪ್ರಜ್ಞೆಯನ್ನು ನಿರಾಕರಿಸಿ, ದೇಹ ಕೇಂದ್ರಿತವಾದ ಪ್ರಜ್ಞೆಯನ್ನು ಸಾರಿದರು. 'ಅರಿವೇ ಗುರು' ಶರಣರ ದಿವ್ಯ ಸಂದೇಶವಾಗಿತ್ತು

## ಗ್ರಾಮ ಪಂಚಾಯಿತಿಗಳು ಸ್ಥಳೀಯ ಸರ್ಕಾರಗಳಾಗಬೇಕು

▸▸ ಮೊದಲನೇ ಪುಟದಿಂದ



ಸಹಕಾರ ರೇಡಿಯೋ ನಿಲಯ ನಿರ್ದೇಶಕ ಜೆ.ಕೆ. ಜಮಾದಾರ ಗಾಂಧೀಜಿ ಕನಸಿನ ಗ್ರಾಮ ಸ್ವರಾಜ ಹಾಗೂ ವಿವೇಕ ಪಥದ ಉದ್ದೇಶ ಹಾಗೂ ಆಶಯಗಳನ್ನು ವಿವರವಾಗಿ ತಿಳಿಸಿಕೊಟ್ಟರು. ಸಭೆಯಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಗ್ಯಾರಂಟಿ ಯೋಜನೆಗಳ ತಾಲೂಕಾ ಅಧ್ಯಕ್ಷ ಅಶೋಕ ಮಂದಾಲಿ, ವಾಸಣ್ಣ ಕುರಡಗಿ, ಗುರಣ್ಣ ಬಳಗಾನೂರ, ವಿದ್ಯಾಧರ ದೊಡ್ಡಮನಿ, ನೀಲಮ್ಮ ಬೋಳನವರ, ವೀರಣ್ಣ ಹುಣಸಿಕಟ್ಟಿ, ಸಿದ್ಧಲಿಂಗೇಶ್ವರ ಪಾಟೀಲ, ಕೃಷ್ಣಗೌಡ ಪಾಟೀಲ, ಅಬ್ದುಲ್ ಕರೀಂ ಸಾಬ, ಶಕುಂತಲಾ ಅಕ್ಕಿ, ಎ.ಎನ್. ನಾಗರಹಳ್ಳಿ, ಎಂ.ಎ. ರಡ್ಡೇರ, ತಾಲೂಕು ಕಾರ್ಯನಿರ್ವಹಣಾಧಿಕಾರಿ ಮಲ್ಲಯ್ಯ ಕೆ, ಪಶುಸಂಗೋಪನಾ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಹಿರಾಲಾಲ ಜಿನಗಾ ಸೇರಿದಂತೆ ಗ್ರಾ.ಪಂ.ಗಳ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು ಉಪಸ್ಥಿತರಿದ್ದರು.

## ಪ್ರವಾಸಿ ತಾಣವಾಗಿಸುವಲ್ಲಿ ಪ್ರಾಮಾಣಿಕವಾಗಿ ಪ್ರಯತ್ನಿಸುವೆ

▸▸ ಮೊದಲನೇ ಪುಟದಿಂದ



ಮಾಜಿ ಶಾಸಕ ರಾಮಣ್ಣ ಲಮಾಣಿ, ಕುಸುಮಾವತಿ ಶಿವಳ್ಳಿ, ಆನಂದಸ್ವಾಮಿ ಗಡ್ಡದೇವರಮಠ, ಎಸ್.ಪಿ. ಬಳಿಗಾರ, ಸುಜಾತಾ ದೊಡ್ಡಮನಿ, ಗುರುನಾಥ ದಾನಪ್ಪನವರ, ಚನ್ನಪ್ಪ ಜಗಲಿ, ಸೋಮಣ್ಣ ಡಾಣಗಲ್, ಪದ್ಮರಾಜ ಪಾಟೀಲ, ಬಸವೇಶ ಮಹಾಂತಶೆಟ್ಟರ, ಸತೀಶಗೌಡ ಪಾಟೀಲ, ಬಿ. ಚಿದಾನಂದಪ್ಪ, ಬಿ.ಎಂ. ವಾಗೀಶಸ್ವಾಮಿ, ಬಿ.ಎಂ. ಹಾಲಸ್ವಾಮಿ, ಅಕ್ಕಿ ರಾಜಣ್ಣ, ಬಿ. ಪಂಚಪ್ಪ, ಡಾ. ಸುಮನ್, ಸೋಮೇಶ್ವರ ಗಡ್ಡಿ ಸೇರಿದಂತೆ ಅನೇಕ ಮುಖಂಡರು, ಭಕ್ತರು ಇದ್ದರು. ಸಾಂಬಯ್ಯ ಹಿರೇಮಠ ನಿರೂಪಿಸಿದರು.

## ಕಿವುಡ ಮಕ್ಕಳ ಶಾಲೆಯಲ್ಲಿ ತೊಗಲು ಗೊಂಬೆಯಾಟ ಪ್ರದರ್ಶನ



■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ವಸತಿಯುತ ಕಿವುಡ ಮಕ್ಕಳ ಶಾಲೆಯಲ್ಲಿ ತೊಗಲು ಗೊಂಬೆಯಾಟ ಪ್ರದರ್ಶನ ನಡೆಯಿತು. ವಿಕಲ ಚೇತನರೆಲ್ಲ ಕುಳಿತು ಈ ತೊಗಲು ಗೊಂಬೆಯಾಟವನ್ನು ಕಂಡು ಖುಷಿ ಅನುಭವಿಸಿದರು.

ಕೊಪ್ಪಳ ಜಿಲ್ಲೆ ಮೊರನಾಳ ಗ್ರಾಮದ 96 ವರ್ಷ ವಯಸ್ಸಿನ, ಪದ್ಮಶ್ರೀ ಪ್ರಶಸ್ತಿ ಪುರಸ್ಕೃತೆ ಭೀಮವ್ವ ದೊಡ್ಡಬಾಳಪ್ಪ ಶಿಳ್ಳೆಕ್ಯಾತರ ತಂಡ ಈ ಪ್ರದರ್ಶನವನ್ನು ನೀಡಿ ಸೈ ಎನ್ನಿಸಿಕೊಂಡಿತು. ಭೀಮವ್ವ ಅವರ ಮಗ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಕೇಶಪ್ಪ ಶಿಳ್ಳಿಕ್ಯಾತರ ವಿರಾಟಪರ್ವ ಎಂಬ ಮಹಾಭಾರತದ ಕಥಾ ಭಾಗವನ್ನು ಮಕ್ಕಳಿಗೆ ತೊಗಲು ಗೊಂಬೆಯಾಟದ ಮೂಲಕ ತೆ-ೂರಿಸಿ ಖುಷಿಪಡಿಸಿದರು.

ಒಂದು ಶತಮಾನಕ್ಕೂ ಹೆಚ್ಚು ಕಾಲದಿಂದ ಭೀಮವ್ವಳ ಕುಟುಂಬ ಈ ಕಲೆಯನ್ನು ಪೋಷಿಸಿ, ಸಂರಕ್ಷಿಸಿ, ಪ್ರದರ್ಶಿಸುತ್ತ ಬಂದಿದೆ. ಗೊಂಬೆಯಾಟಕ್ಕೆ ತಕ್ಕಂತೆ ಕೇಶಪ್ಪ ನೀಡಿದ ಹಿನ್ನೆಲೆ ಧ್ವನಿ ಅರ್ಥಪೂರ್ಣವಾಗಿತ್ತು. ಅವರೊಂದಿಗೆ ಅವರ ಮೊಮ್ಮಕ್ಕಳೂ ಕೈಜೋಡಿಸಿದ್ದು ತಮ್ಮ ಕುಟುಂಬ ಈ ಕಲೆಯನ್ನು ಇನ್ನೂ ಮುಂದಿನ ಪೀಳಿಗೆಗೆ ಕೊಂಡೊಯ್ಯುತ್ತೇವೆ ಎನ್ನುವ ಸಂದೇಶವನ್ನು ನೀಡುವಂತಿತ್ತು.

ಪ್ರದರ್ಶನ ನೀಡಿದ ಕಲಾವಿದರನ್ನು ಸಂಸ್ಥೆಯ ಪರವಾಗಿ ಆಡಳಿತಾಧಿಕಾರಿ ಎಸ್. ಆರ್. ಗೌಡರ ಸನ್ಮಾನಿಸಿದರು. ಮುಖ್ಯಶಿಕ್ಷಕ ಎಲ್.ಎಂ. ತಳಬಾಳ, ಬಿ.ಎಸ್. ಗಾಣಿಗೇರ, ಎ.ಸಿ. ಮರಡಿಮಠ, ಎಸ್.ವಿ. ಪಾಟೀಲ, ಆರ್.ಕೆ. ಬಾಗವಾನ, ಎಂ.ವಿ. ಹರ್ಲಾಪೂರ, ವಿ.ಕೆ. ರೇಣುಕಮಠ, ಟಿ.ಬಿ. ಆಡೂರ, ಎ.ಎಸ್. ಚಿಕ್ಕಮಠ, ಎಸ್.ಎ. ಅರಮನಿ, ಶಿಕ್ಷಕಿ ಎಸ್. ಎಸ್. ಜುಟ್ಲದ, ಬಿ.ಬಿ. ಪಟ್ಟಣಶೆಟ್ಟಿ, ಎ.ಆರ್. ಹುಡೇದಗಟ್ಟಿ ಇದ್ದರು.

### ಪರಿಶಿಷ್ಟ ಜಾತಿ ಒಳ ಮೀಸಲಾತಿ ಜಾರಿ ಮಾಡುವಂತೆ ಮುಖ್ಯಮಂತ್ರಿಗಳಿಗೆ ಮನವಿ

# ತೀರ್ಪು ಜಾರಿಗೊಳಿಸಲು ಅನಗತ್ಯ ವಿಳಂಬ

■ ವಿಜಯಸಾಕ್ಷಿ ಸುದ್ದಿ, ಗದಗ

ಸರ್ವೋಚ್ಚ ನ್ಯಾಯಾಲಯದ ತೀರ್ಪಿನ ಆಧಾರದ ಮೇಲೆ ತಕ್ಷಣವೇ ಪರಿಶಿಷ್ಟ ಜಾತಿ ಒಳ ಮೀಸಲಾತಿ ಜಾರಿ ಮಾಡುವಂತೆ ಮಾದಿಗ ಸಂಘಟನೆಗಳ ಒಕ್ಕೂಟ ಗದಗ ವತಿಯಿಂದ ಜನಾಕ್ರೋಶ ಪ್ರತಿಭಟನೆ ಮೂಲಕ ಗದಗ ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಯಿತು.



ಮನವಿ ಸಲ್ಲಿಸಿ ಮಾತನಾಡಿದ ಮಾದಿಗ ಸಮಾಜ ಒಕ್ಕೂಟದ ಮುಖಂಡರು, ಕರ್ನಾಟಕ ರಾಜ್ಯದ ಪರಿಶಿಷ್ಟ ಜಾತಿ ಜಾತಿಗಳ ಸಮುದಾಯದೊಳಗಿನ ಅತೀ ಹಿಂದುಳಿದ ಮತ್ತು ಅವಕಾಶ ವಂಚಿತ ಸಮುದಾಯಗಳಿಗೆ ಸಾಮಾಜಿಕ ನ್ಯಾಯವನ್ನು ಒದಗಿಸುವ ಸಲುವಾಗಿ ಜಾರಿಯಾಗಬೇಕಿರುವ ಒಳ ಮೀಸಲಾತಿಯ ಬೇಡಿಕೆ ಮತ್ತು ಹೋರಾಟ 35 ವರುಷಗಳಿಂದ ನನೆಗುದಿಗೆ ಬಿದ್ದಿದೆ. ಈ ಅಸಮಾನತೆಯನ್ನು ಸರಿಪಡಿಸಲು, ಪರಿಶಿಷ್ಟ ಜಾತಿ ಪಟ್ಟಿಯಲ್ಲಿರುವ 101 ಸಮುದಾಯಗಳಿಗೂ ಜನಸಂಖ್ಯೆಗೆ ಅನುಗುಣವಾಗಿ ಒಳಮೀಸಲಾತಿ ನೀಡಲು ರಾಜ್ಯ ಸರ್ಕಾರಗಳಿಗೆ ಆದೇಶವನ್ನು ನೀಡಿದೆ.

ಆದರೆ, ಕರ್ನಾಟಕ ಸರ್ಕಾರವು ಈ ಸರ್ವೋಚ್ಚ ನ್ಯಾಯಾಲಯದ ತೀರ್ಪನ್ನು ಜಾರಿಗೊಳಿಸಲು ಅನಗತ್ಯವಾಗಿ ವಿಳಂಬ ಮಾಡುತ್ತಿರುವುದು ನಮ್ಮ ಸಮುದಾಯದಲ್ಲಿ ತೀವ್ರ ಅಸಮಾಧಾನ ಮತ್ತು ಆತಂಕಕ್ಕೆ ಕಾರಣವಾಗಿದೆ. ನಾಗಮೋಹನ್ ದಾಸ್ ಆಯೋಗಕ್ಕೆ ಸರ್ಕಾರ ಸರಿಯಾದ ರೀತಿಯಲ್ಲಿ ಸಹಕಾರ ನೀಡುತ್ತಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಆಗಸ್ಟ್ 11ರಿಂದ ವಿಧಾನ ಮಂಡಲಗಳ ಅಧಿವೇಶನ ಆರಂಭವಾಗುತ್ತಿದ್ದು, ಸರ್ಕಾರದ ವಿಳಂಬ ಧೋರಣೆಯ ಬಗ್ಗೆ ಜನಾಕ್ರೋಶ ಉಗ್ರಸ್ವರೂಪ ತಾಳುವುದು ನಿಶ್ಚಿತ ಎಂದು ಎಚ್ಚರಿಸಿದರು.

ಈ ಸಂದರ್ಭದಲ್ಲಿ ಮಾದಿಗ ಸಮಾಜದ ಮುಖಂಡರಾದ ಅಶೋಕ ಕುಡತಿನ್ನಿ, ಉಡಚಪ್ಪ ಹಳ್ಳಿಕೇರಿ, ರಾಘವೇಂದ್ರ ಪರಸಪ್ಪ ಪರಾಪೂರ, ಗಣೇಶ್ ಹುಬ್ಬಳ್ಳಿ, ಮಂಜುನಾಥ್ ಕೊಟ್ನೆಕಲ್, ಲಿಂಗಪ್ಪ ದೊಡ್ಡಮನಿ, ಭೀಮಪ್ಪ ಮಾದರ, ಮಲ್ಲು ಮಾದರ, ಶಿವಪ್ಪ ಮಾದರ, ಮಾಲತೇಶ್ ಮಾದರ, ರವಿ ಮಾದರ, ಚಂದ್ರಶೇಖರ್ ಮಾದರ, ಸುರೇಶ್ ಹಾದಿಮನಿ, ಪ್ರವೀಣ್ ವಡ್ಡಟ್ಟಿ, ಚಂದ್ರು ಹಂಚಿನಾಳ, ಮಂಜು ಹಾಬುರಡಿ, ಪಡೆಯಪ್ಪ ಪೂಜಾರ, ಬಸವರಾಜ್ ಮುಳ್ಳಾಳ, ಡಿ.ಜೆ. ಕಟ್ಟಿಮನಿ, ಚಂದ್ರು ಹರಿಜನ ಸೇರಿದಂತೆ ಮಾದಿಗ ಸಮಾಜದ ಸ್ವಾಮೀಜಿಗಳು ವಕೀಲರು, ನೌಕರರು ಪಾಲ್ಗೊಂಡಿದ್ದರು.

ರಾಜ್ಯ ಸರ್ಕಾರದ ನಿರ್ಲಕ್ಷದಿಂದಾಗಿ ಆರು ತಿಂಗಳಾದರೂ ಸರಿಯಾದ ಮಾಹಿತಿಗಳು ಆಯೋಗಕ್ಕೆ ಬಂದಿಲ್ಲ. ಕೆಲವು ಇಲಾಖೆಗಳ ಮಾಹಿತಿ ಅಪೂರ್ಣವಾಗಿದೆ. ಆಯೋಗ ನಡೆಸಿದ ಸಮೀಕ್ಷೆ, ಸ್ಟಿಕ್ಕರ್ ಅಂಟಿಸುವ ಪ್ರಕ್ರಿಯೆಗಳು ಗೊಂದಲ ಹುಟ್ಟುಹಾಕಿ ನಗೆಪಾಟಲಿಗೀಡಾಯಿತು. ಮೂರು ವಾರದಲ್ಲಿ ಸಮೀಕ್ಷೆ ಮುಗಿಸಿ ಸರ್ಕಾರದ ಹೇಳಿಕೆ ಕಿಮ್ಮತ್ತು ಕಳೆದುಕೊಂಡಿದೆ ಎಂದು ಆರೋಪಿಸಿದರು.

## ದ್ವೇಷ ಭಾಷಣ ನಿಯಂತ್ರಣ ಮಸೂದೆ ಅಂಗೀಕಾರವಾಗಲಿ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು



ದ್ವೇಷ ಭಾಷಣ ನಿಯಂತ್ರಣ ಮಸೂದೆ ಆಗಸ್ಟ್ 11ರಂದು ನಡೆಯಲಿರುವ ಮುಂಗಾರು ಅಧಿವೇಶನದಲ್ಲಿ ಅಂಗೀಕಾರವಾಗಿ ಆದಷ್ಟು ಶೀಘ್ರ ಅನುಷ್ಠಾನಕ್ಕೆ ಬರಬೇಕು ಎಂದು ವೆಲ್ಫೇರ್ ಪಾರ್ಟಿ ಆಫ್ ಇಂಡಿಯಾ ರಾಜ್ಯಾಧ್ಯಕ್ಷ, ವಕೀಲ ತಾಹಿರ್ ಹುಸೇನ್ ಅಗ್ರಹಿಸಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ಮಂಗಳೂರಿನಲ್ಲಿ ಇತ್ತೀಚೆಗೆ ನಡೆದ ಸರಣಿ ಕೊಲೆಗಳ ಬಳಿಕ ದ್ವೇಷ ಭಾಷಣ, ರಾಜ್ಯದ ಕೆಲವೊಂದು ಡಿಜಿಟಲ್ ಮಾಧ್ಯಮಗಳು ಸುಳ್ಳು ಸುದ್ದಿ ಹಬ್ಬಿಸುವಲ್ಲಿ ನಿರಂತರವಾಗಿ ತೊಡಗಿದ್ದು, ಒಂದು ನಿರ್ದಿಷ್ಟ ಸಮುದಾಯದ ವಿರುದ್ಧ ದ್ವೇಷ ಸಾರಿದ್ದಾರೆ.

ಇತ್ತೀಚೆಗೆ ರಾಜ್ಯದ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಧರ್ಮಸ್ಥಳ ಪ್ರಕರಣ ಸಂಬಂಧ ಒಂದು ಸಮುದಾಯವನ್ನು ಗುರಿಯಾಗಿಸಿ ಮಾಡಿರವ ದ್ವೇಷದ ಮಾತುಗಳಿಂದ ಸಮಾಜದಲ್ಲಿ ಸಾಕಷ್ಟು ಗೊಂದಲ ಉಂಟಾಯಿತು. ಎಸ್ಐಟಿ ತನಿಖೆ ನಡೆಸುವಾಗ ಒಂದು ಜವಾಬ್ದಾರಿಯುತ ಹುದ್ದೆಯಲ್ಲಿರುವ ಆರ್ ಅಶೋಕ್ ಇಂತಹ ಕೀಳುಮಟ್ಟದ ಹೇಳಿಕೆ ನೀಡಿದ್ದು ಅವರ ಹುದ್ದೆಗೆ ಶೋಭೆ ತರುವಂತದಲ್ಲ.

ಅಂತೆಯೇ ಮುಂಬರುವ ಮುಂಗಾರು ಅಧಿವೇಶನದಲ್ಲಿ ಗೋ ಹತ್ಯೆ ನಿಷೇಧ ಕಾಯ್ದೆ ಮತ್ತು ಮೀಸಲಾತಿ ಮರು ಜಾರಿಗೆ ತಂದು ರಾಜ್ಯದ ಕಾಂಗ್ರೆಸ್ ಸರಕಾರವು ನುಡಿದಂತೆ ನಡೆಯಬೇಕೆಂದು ಆಗ್ರಹಿಸಿದ್ದಾರೆ.

## ರಾಜಕೀಯ ಉದ್ದೇಶದ ಆರೋಪ ಬೇಡ

▸▸ ಮೊದಲನೇ ಪುಟದಿಂದ

ಹೆಚ್.ಕೆ. ಪಾಟೀಲ ಅಭಿಪ್ರಾಯ ವ್ಯಕ್ತಪಡಿಸಿದರು.

ಅವರು ಶನಿವಾರ ಲಕ್ಷ್ಮೇಶ್ವರದಲ್ಲಿ ಇಂದಿರಾ ಕ್ಯಾಂಟೀನ್ ಉದ್ಘಾಟನೆಗೆ ಆಗಮಿಸಿದ ಸಂದರ್ಭದಲ್ಲಿ ಪತ್ರಕರ್ತರೊಂದಿಗೆ ಮಾತನಾಡಿದರು.

ಯೂರಿಯಾ ಕಾಳ ಸಂತೆಯಲ್ಲಿ ಮಾರಾಟ ಆಗುತ್ತಿದೆ ಎಂಬ ವಿರೋಧಪಕ್ಷದ ಆರೋಪಕ್ಕೆ ಸೂಕ್ತ ದಾಖಲೆಯನ್ನು ಅಧಿಕಾರಿಗಳಿಗೆ ಸಲ್ಲಿಸಿದರೆ ಅವರ ಮೇಲೆ ಕ್ರಮ ಕೈಗೊಳ್ಳಲಾಗುವುದು. ಮುಖ್ಯಮಂತ್ರಿಗಳ ಭೇಟಿ ಕುರಿತು ಪ್ರತಿಕ್ರಿಯಿಸಿ, ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ವಿಶೇಷ ಅನುದಾನ ಕಲ್ಪಿಸುವಂತೆ ಕೋರಲಾಗಿದೆ. ಅವರೂ ಸ್ಪಂದಿಸಿದ್ದಾರೆ ಎಂದರು.

ಲಕ್ಷ್ಮೇಶ್ವರ-ಗದಗ ರಸ್ತೆ ಅಭಿವೃದ್ಧಿ ಮರೀಚಿಕೆಯಾಗಿದೆ. ತಾವೂ ಸಹ ಈ ಮಾರ್ಗದಲ್ಲಿ ಸಂಚರಿಸದೇ ಸುತ್ತುವರಿದು ಹೋಗುತ್ತಿದ್ದೀರಿ, ನಿರ್ಲಕ್ಷವೇಕೆ ಎಂದು ಪತ್ರಕರ್ತರು ಪ್ರಶ್ನಿಸಿದಾಗ, ಈಗಾಗಲೇ ಮುಳಗುಂದವರಗೆ ರಸ್ತೆ ಅಭಿವೃದ್ಧಿಪಡಿಸಲಾಗಿದೆ. ಉಳಿದ ರಸ್ತೆ ಅಭಿವೃದ್ಧಿಪಡಿಸಲಾಗುವುದು ಎಂದರು.

ಈ ವೇಳೆ ಕೆಪಿಸಿಸಿ ಸದಸ್ಯ ಆನಂದ ಗಡ್ಡದೇವರಮಠ, ಸುಜಾತಾ ದೊಡ್ಡಮನಿ, ಚನ್ನಪ್ಪ ಜಗಲಿ, ಪುರಸಭೆ ಅಧ್ಯಕ್ಷೆ ಯಲ್ಲವ್ವ ದುರಗಣ್ಣವರ, ಉಪಾಧ್ಯಕ್ಷ ಫಿರ್ದೋಷ ಆಡೂರ, ಸ್ಥಾಯಿ ಸಮಿತಿ ಅಧ್ಯಕ್ಷ ವಿಜಯ ಕರಡಿ ಸೇರಿ ಪುರಸಭೆ ಸದಸ್ಯರು, ಕಾಂಗ್ರೆಸ್ ಮುಖಂಡರು ಇದ್ದರು.

## ಗ್ಯಾರಂಟಿ ಯೋಜನೆಗಳಿಂದ ರಾಜ್ಯ ಸಮೃದ್ಧವಾಗಿದೆ

▸▸ ಮೊದಲನೇ ಪುಟದಿಂದ

ಕಲ್ಪಿಸಬೇಕು. ಬೆಳೆಯುತ್ತಿರುವ ಲಕ್ಷ್ಮೇಶ್ವರ, ಮುಂಡರಗಿ, ಶಿರಹಟ್ಟಿ ಪಟ್ಟಣಗಳ ಅಭಿವೃದ್ಧಿಗೆ ವಿಶೇಷ ಅನುದಾನ ಕಲ್ಪಿಸಬೇಕು ಎಂದು ಸಚಿವರಿಗೆ ಮನವಿ ಮಾಡಿದರು.

ಈ ವೇಳೆ ಪುರಸಭೆ ಅಧ್ಯಕ್ಷೆ ಯಲ್ಲಮ್ಮ ದುರಗಣ್ಣವರ, ಮಾಜಿ ಶಾಸಕರಾದ ಜಿ.ಎಸ್. ಗಡ್ಡದೇವರಮಠ, ರಾಮಣ್ಣ ಲಮಾಣಿ, ಕೆಪಿಸಿಸಿ ಸದಸ್ಯರಾದ ಆನಂದ ಗಡ್ಡದೇವಮಠ, ಸುಜಾತಾ ದೊಡ್ಡಮನಿ, ಗುರುನಾಥ ದಾನಪ್ಪನವರ, ಚನ್ನಪ್ಪ ಜಗಲಿ, ನಾಗರಾಜ ಮಡಿವಾಳರ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ಎಸ್‌ಪಿ ರೋಹನ್ ಜಗದೀಶ, ಪುರಸಭೆ ಉಪಾಧ್ಯಕ್ಷ ಫಿರ್ದೋಸ ಆಡೂರ, ಸ್ಥಾಯಿ ಸಮಿತಿ ಅಧ್ಯಕ್ಷ ವಿಜಯ ಕರಡಿ, ಜಿ.ಪಂ ಮಾಜಿ ಅಧ್ಯಕ್ಷ ಎಸ್.ಪಿ. ಬಳಿಗಾರ ಸೇರಿ ಪುರಸಭೆ ಸದಸ್ಯರು, ಜನಪ್ರತಿನಿಧಿಗಳು, ಅಧಿಕಾರಿಗಳು ಇದ್ದರು.

ಜಿಲ್ಲಾ ಯೋಜನಾ ನಿರ್ದೇಶಕ ಬಸನಗೌಡ ಕೊಟ್ಟೂರ ಸ್ವಾಗತಿಸಿದರು. ಮುಖ್ಯಾಧಿಕಾರಿ ಮಾಂತೇಶ ಬೀಳಗಿ, ಇಂಜಿನಿಯರ್ ವಿ.ಪಿ. ಕಾಟೇವಾಲೆ, ಮಂಜುನಾಥ ಮುದಗಲ್, ಈಶ್ವರ ಮೆಡ್ಲೇರಿ ನಿರೂಪಿಸಿದರು. ಇದೇ ಸಂದರ್ಭದಲ್ಲಿ ಒಳಚರಂಡಿ ಸ್ವಚ್ಛತೆ ಸಲುವಾಗಿ 50 ಲಕ್ಷ ರೂ ವೆಚ್ಚದಲ್ಲಿ ಖರೀದಿಸಿದ ಸಕ್ಕಿಂಗ್ ಮಷಿನ್ ವಾಹನಕ್ಕೂ ಸಚಿವರು ಚಾಲನೆ ನೀಡಿದರು.

## ಮಾಧ್ಯಮ ಅಕಾಡೆಮಿಯಿಂದ ಫೆಲೋಷಿಪ್; ಅರ್ಜಿ ಸಲ್ಲಿಸಲು ಅವಧಿ ವಿಸ್ತರಣೆ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕರ್ನಾಟಕ ಮಾಧ್ಯಮ ಅಕಾಡೆಮಿಯ ವತಿಯಿಂದ ಪತ್ರಕರ್ತರಿಗೆ ಆರು ವಿಷಯಗಳ ಕುರಿತ ಫೆಲೋಷಿಪ್ ಗೆ ಅರ್ಜಿ ಸಲ್ಲಿಸಲು ಅಂತಿಮ ದಿನಾಂಕವನ್ನು 2025ರ ಆಗಸ್ಟ್ 8 ರವರೆಗೆ ವಿಸ್ತರಿಸಲಾಗಿದೆ.

ಅಕಾಡೆಮಿಯ ಸಾಮಾನ್ಯ ಆಯವ್ಯಯದಡಿ ಎರಡು, ಮಹಿಳಾ ಆಯವ್ಯಯದಡಿ ಎರಡು ಹಾಗೂ ಪರಿಶಿಷ್ಟ ಜಾತಿ ಉಪಯೋಜನೆಯಡಿ ಒಂದು ಹಾಗೂ ಪರಿಶಿಷ್ಟ ಪಂಗಡ ಉಪ ಯೋಜನೆಯಡಿ ಒಂದು ಫೆಲೋಷಿಪ್ ನೀಡಲಾಗುವುದು. ಫೆಲೋಷಿಪ್ ಅವಧಿ 6 ತಿಂಗಳು.

ಕನಿಷ್ಠ ಐದು ವರ್ಷ ಸೇವಾನುಭವ ಹೊಂದಿರುವ, ಕನಿಷ್ಠ 30 ವರ್ಷದಿಂದ 50 ವರ್ಷ ವಯೋಮಿತಿಯ ಪತ್ರಕರ್ತರು ಫೆಲೋಷಿಪ್ ಗೆ ಅರ್ಜಿ ಸಲ್ಲಿಸಬಹುದು. ಪತ್ರಕರ್ತರು ಪದವೀಧರರಾಗಿರಬೇಕು ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಮಾಧ್ಯಮ ಪಟ್ಟಿಯಲ್ಲಿರುವ ಪತ್ರಿಕೆಗಳು ಹಾಗೂ ಉಪಗ್ರಹ ಸುದ್ದಿವಾಹಿನಿಗಳಲ್ಲಿ ಕಾರ್ಯನಿರ್ವಹಿಸುತ್ತಿರಬೇಕು. ಈ ಕುರಿತು ಸಂಪಾದಕರ ದೃಢೀಕರಣ ಪತ್ರ ಸಲ್ಲಿಸಬೇಕು.

ಫೆಲೋಷಿಪ್ ನ ವಿಷಯಗಳು ಈ ಕೆಳಗಿನಂತಿವೆ.

1. ಬಾಲ್ಯವಿವಾಹ, POCSO, ಮರ್ಯಾದೆಗೇಡು ಹತ್ಯೆ- ಮಾಧ್ಯಮ ದೃಷ್ಟಿಕೋನ
2. ಕೃಷಿ ಸಂವಹನ- ಒಂದು ಅಧ್ಯಯನ
3. ಕಲ್ಯಾಣ ಕರ್ನಾಟಕ ಪ್ರವಾಸೋದ್ಯಮ ಅಭಿವೃದ್ಧಿಯಲ್ಲಿ ಮಾಧ್ಯಮಗಳ ಪಾತ್ರ
4. ಬುಡಕಟ್ಟು ಕಾಯ್ದೆಗಳು ಹಾಗೂ ಕಲ್ಯಾಣ ಕಾರ್ಯಕ್ರಮಗಳ ಅನುಷ್ಠಾನ- ಮಾಧ್ಯಮ ನೋಟ
5. Role of Media in creating awareness on cybercrime and digital safety (ಇಂಗ್ಲಿಷ್ನಲ್ಲಿ ಅಧ್ಯಯನ ವರದಿ ಸಲ್ಲಿಸುವುದು)
6. ಮಾಧ್ಯಮ ಶಿಕ್ಷಣ ಮತ್ತು ವೃತ್ತಿ ನಡುವಿನ ಅಂತರ: ಕಾರಣಗಳು, ಪರಿಣಾಮ ಹಾಗೂ ಪರಿಹಾರ

ಫೆಲೋಷಿಪ್ ಅವಧಿ ಆರು ತಿಂಗಳು. ಅರ್ಜಿ ಸ್ವೀಕರಿಸಲು 8ನೇ ಆಗಸ್ಟ್ 2025 ಕೊನೆಯ ದಿನವಾಗಿದ್ದು, ವಿಜೇತರ ಆಯ್ಕೆಯಲ್ಲಿ ಅಕಾಡೆಮಿಯ ಸಮಿತಿಯ ತೀರ್ಮಾನವೇ ಅಂತಿಮವಾಗಿರುತ್ತದೆ. ಅರ್ಜಿ ನಮೂನೆಯನ್ನು ಅಕಾಡೆಮಿಯ ವೆಬ್ ಸೈಟ್ mediaacademy.karnataka.gov.inನಿಂದ ಡೌನ್‌ಲೋಡ್ ಮಾಡಿಕೊಂಡು ಭರ್ತಿ ಮಾಡಿ ಪೂರಕ ದಾಖಲೆಗಳು ಹಾಗೂ ಅಧ್ಯಯನ ಕುರಿತ ಟಿಪ್ಪಣಿಯೊಂದಿಗೆ ಕಾರ್ಯದರ್ಶಿ, ಕರ್ನಾಟಕ ಮಾಧ್ಯಮ ಅಕಾಡೆಮಿ, ಪೋಡಿಯಂ ಬ್ಲಾಕ್, ವಿಶ್ವೇಶ್ವರಯ್ಯ ಗೋಪುರ, ಡಾ. ಬಿ.ಆರ್. ಅಂಬೇಡ್ಕರ್ ವೀದಿ, ಬೆಂಗಳೂರು 560001 ಇವರಿಗೆ ಕಳುಹಿಸಬಹುದು ಅಥವಾ kmafellowship2025@gmail.com ಗೆ ಇ – ಮೇಲ್ ಮೂಲಕ ಕಳಿಸಬಹುದು.

### ಸಚಿವ ಎಚ್.ಕೆ. ಪಾಟೀಲ ಅಧ್ಯಕ್ಷತೆಯಲ್ಲಿ ಬೀದಿ ಬದಿ ವ್ಯಾಪಾರಸ್ಥರ ಸಮಸ್ಯೆಗಳ ಕುರಿತ ಸಭೆ

# ಸಂಗ್ರಹಿಸಿದ ಶುಲ್ಕ ಬೀದಿ ಬದಿ ವ್ಯಾಪಾರಸ್ಥರಿಗೇ ತಲುಪಲಿ

■ **ವಿಜಯಸಾಕ್ಷಿ ಸುದ್ದಿ, ಗದಗ**

ಸರ್ಕಾರದ ಕಾನೂನು ಹಾಗೂ ಮಾರ್ಗಸೂಚಿಯನ್ವಯ ಬೀದಿ ಬದಿ ವ್ಯಾಪಾರಸ್ಥರಿಂದ ಸಂಗ್ರಹಿಸುವ ಶುಲ್ಕ ನಿಗದಿತವಾಗಿರಲಿ. ಸಂಗ್ರಹಿಸಿದ ಶುಲ್ಕ ಪುನಃ ಬೀದಿ ಬದಿ ವ್ಯಾಪಾರಸ್ಥರಿಗೆ ಸದ್ಬಳಕೆಯಾಗಲಿ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಗದಗ ಜಿಲ್ಲಾಡಳಿತ ಭವನದಲ್ಲಿ ಶನಿವಾರ ಏರ್ಪಡಿಸಿದ್ದ ಗದಗ ಜಿಲ್ಲಾ ಬೀದಿ ಬದಿ ವ್ಯಾಪಾರಸ್ಥರ ಸಮಸ್ಯೆಗಳ ಕುರಿತಂತೆ ಚರ್ಚಿಸಲು ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಸಚಿವರು ಮಾತನಾಡಿದರು.

ಬೀದಿ ಬದಿ ವ್ಯಾಪಾರಸ್ಥರಿಂದ ಸಂಗ್ರಹಿಸಿದ ಶುಲ್ಕ ಮತ್ತು ಹಣದ ಕ್ರೋಢೀಕರಣ ಸದ್ಬಳಕೆಯಾಗುತ್ತಿಲ್ಲವೆಂದು ದೂರುಗಳು ಬರುತ್ತಿವೆ. ಸರ್ಕಾರದ ಮಾರ್ಗಸೂಚಿಗಳನ್ವಯ ಸಂಗ್ರಹಿಸಿದ ಶುಲ್ಕದ ಮೊತ್ತ ಸರಿಯಾಗಿ ಅರ್ಹರಿಗೆ ಸದ್ಬಳಕೆಯಾಗಬೇಕು ಎಂದು ಸೂಚಿಸಿದರು.

ಸಭೆಯಲ್ಲಿ ಬೀದಿ ಬದಿ ವ್ಯಾಪಾರಸ್ಥರ ಸಂಘದ ಪದಾಧಿಕಾರಿಗಳು ತಮ್ಮ ಸಮಸ್ಯೆಗಳ ಕುರಿತು ಹಾಗೂ ಶುಲ್ಕ ಸಂಗ್ರಹಣೆ, ಸಮಿತಿ ರಚಿಸುವ ಕುರಿತು ಸಚಿವರ ಗಮನಕ್ಕೆ ತಂದರು. ಇದಕ್ಕೆ ಪ್ರತಿಕ್ರಿಯಿಸಿದ ಸಚಿವ ಎಚ್.ಕೆ. ಪಾಟೀಲ, ಜಿಲ್ಲಾಧಿಕಾರಿಗಳ ಮೂಲಕ ಬೀದಿಬದಿ ವ್ಯಾಪಾರಸ್ಥರ ಶುಲ್ಕ ಸಂಗ್ರಹಣೆ ಹಾಗೂ ಸಂಗ್ರಹಿಸಿದ ಶುಲ್ಕ ಸದ್ಬಳಕೆ ಮಾಡುವ ಕುರಿತಂತೆ ಸರ್ಕಾರದ ಸಂಪೂರ್ಣ ಮಾರ್ಗಸೂಚಿಗಳೊಂದಿಗೆ ಜಿಲ್ಲೆಯ ನಗರಸಭೆ ಹಾಗೂ ಸ್ಥಳೀಯ ಸಂಸ್ಥೆಗಳ ಮುಖ್ಯಾಧಿಕಾರಿಗಳಿಗೆ ತಿಳಿಸುವ ಸೂಚನೆ ನೀಡಿದರು. ಅಲ್ಲದೇ ಪಟ್ಟಣ ಮೇಲುಸ್ತುವಾರಿ ಸಮಿತಿ ಸಭೆಯನ್ನು 2-3 ದಿನಗಳೊಳಗಾಗಿ, ಕುಂದುಕೊರತೆ ಸಮಿತಿ ಮತ್ತು ಟಿವಿಸಿ ಸಮಿತಿ ಸಭೆಯನ್ನು 5 ದಿನಗಳೊಳಗಾಗಿ ರಚಿಸುವಂತೆ ಎಲ್ಲ ಸ್ಥಳೀಯ ಸಂಸ್ಥೆಗಳಿಗೆ ಸಚಿವರು ಸೂಚಿಸಿದರು.



ಬೀದಿ ಬದಿ ವ್ಯಾಪಾರಸ್ಥರೂ ಸಹ ಗೌರವಯುತವಾಗಿ ಸಮಾಜದಲ್ಲಿ ಎಲ್ಲರಂತೆ ಜೀವನ ಸಾಗಿಸಬೇಕು. ಇದಕ್ಕಾಗಿ ಈಗಾಗಲೇ ಗದಗಿನಲ್ಲಿ ವ್ಯಾಪಾರಸ್ಥರಿಗೆ ತಳ್ಳುವ ಹೈಟೆಕ್ ಗಾಡಿ, ನೆರಳಿಗಾಗಿ ಕೊಡೆ ಸೇರಿದಂತೆ ಹಲವಾರು ಸೌಲಭ್ಯಗಳನ್ನು ನೀಡಲಾಗಿದೆ. ಇವುಗಳ ಸದ್ಬಳಕೆಯೊಂದಿಗೆ ಆರ್ಥಿಕವಾಗಿ ಬೀದಿ ಬದಿ ವ್ಯಾಪಾರಸ್ಥರು ಸಹ ಸಬಲರಾಗಬೇಕು ಎಂದು ಹೇಳಿದರು.

ಬೀದಿ ಬದಿ ವ್ಯಾಪಾರಸ್ಥರಿಂದ ಸಂಗ್ರಹಿಸಿದ ಶುಲ್ಕ ಸದ್ಬಳಕೆಯಾಗದೇ ಸರ್ಕಾರಕ್ಕೆ ಮರಳಿ ಹೋಗಿದೆ ಎಂದು ವ್ಯಾಪಾರಸ್ಥರು ಸಭೆಯ ಗಮನಕ್ಕೆ ತಂದರು. ಇದಕ್ಕೆ ಪ್ರತಿಕ್ರಿಯಿಸಿದ ಸಚಿವರು, ಈ ವಿಷಯದ ಕುರಿತು ಜಿಲ್ಲಾಧಿಕಾರಿಗಳು ಪರಿಶೀಲನೆ ನಡೆಸಿ ನಿಜವಾಗಿಯೂ ಅನುದಾನ ಅಪವ್ಯಯ ಅಥವಾ ಮರಳಿ ಹೋಗಿದ್ದರೆ ಅದಕ್ಕೆ ಕಾರಣರಾದ ಅಧಿಕಾರಿಗಳ ಮೇಲೆ ಶಿಸ್ತು ಕ್ರಮ ವಹಿಸುವಂತೆ ಸೂಚಿಸಿದರು. ಅಲ್ಲದೇ ಸರ್ಕಾರಕ್ಕೆ ಮರಳಿ ಹೋಗಿರುವ ಅನುದಾನವನ್ನು ಪುನಃ ತರಲು ಕ್ರಮ ಕೈಗೊಳ್ಳಲು ತಿಳಿಸಿದರು.

ಸಭೆಯಲ್ಲಿ ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ನಗರಾಭಿವೃದ್ಧಿ ಪ್ರಾದಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ತಾಲೂಕು ಗ್ಯಾರಂಟಿ ಸಮಿತಿಯ ಅಧ್ಯಕ್ಷ ಅಶೋಕ ಮಂದಾಲಿ, ಪ್ರಭು ಬುರಬುರೆ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ, ಅಪರ ಜಿಲ್ಲಾಧಿಕಾರಿ ಡಾ. ದುರುಗೇಶ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ ಕೊಟ್ಟೂರ, ಉಪವಿಭಾಗಾಧಿಕಾರಿ ಗಂಗಪ್ಪ ಎಂ, ನಗರಸಭೆ ಪೌರಾಯುಕ್ತ ರಾಜಾರಾಮ ಪವಾರ, ಕೌಶಲ್ಯಾಭಿವೃದ್ಧಿ ಇಲಾಖೆ ಅಧಿಕಾರಿ ಬಸವರಾಜ ಮಲ್ಲೂರ ಸೇರಿದಂತೆ ಎಲ್ಲ ಸ್ಥಳೀಯ ಸಂಸ್ಥೆಗಳ ಮುಖ್ಯಾಧಿಕಾರಿಗಳು, ಬೀದಿ ಬದಿ ವ್ಯಾಪಾರಸ್ಥರ ಸಂಘಗಳ ಪದಾಧಿಕಾರಿಗಳು ಹಾಜರಿದ್ದರು.

> ಬೀದಿ ಬದಿ ವ್ಯಾಪಾರಸ್ಥರು ಹಾಗೂ ಸಂಘದ ಪದಾಧಿಕಾರಿಗಳು ಸರ್ಕಾರಿ ಕಚೇರಿಗೆ ಅಧಿಕಾರಿಗಳನ್ನು ಭೇಟಿ ಮಾಡಲು ಬಂದಾಗ ಅಧಿಕಾರಿಗಳು ಅವರೊಂದಿಗೆ ಸಂಯಮದಿಂದ, ಗೌರವಯುತವಾಗಿ ನಡೆದುಕೊಳ್ಳಬೇಕು. ಯಾವುದೇ ತರಹದ ದರ್ಪ, ಕಠೋರ ವರ್ತನೆ ಸಹಿಸಲಾಗದು. ಬೀದಿ ಬದಿ ವ್ಯಾಪಾರಸ್ಥರಿಗಾಗಿಯೇ ಕಾನೂನು ರೂಪಿಸಲಾಗಿದೆ. ಕಾನೂನು ರಾಜ್ಯದಲ್ಲಿ ಜಾರಿಯಾಗಲು ವಿಳಂಬವಾಗಿರಬಹುದು. ಆದರೆ ಗದಗ ಜಿಲ್ಲೆಯಲ್ಲಿ ಕಾನೂನು ಅನುಷ್ಠಾನ ಆಗಬೇಕು. ಆಗಸ್ಟ್ 15ರಿಂದ ಕಾನೂನು ಸರಿಯಾಗಿ ಸಮರ್ಪಕವಾಗಿ ಅನುಷ್ಠಾನವಾಗಲಿದೆ ಎಂದು ಸಚಿವ ಎಚ್. ಕೆ. ಪಾಟೀಲ ತಿಳಿಸಿದರು.

## ಪ್ಲಾಸ್ಟಿಕ್ ಮುಕ್ತ ಗ್ರಾಮ ಘೋಷಣೆಗೆ ಸ್ಪಂದನೆ



■ **ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಪ್ಲಾಸ್ಟಿಕ್ ಮುಕ್ತ ಗ್ರಾಮವನ್ನಾಗಿ ಮಾಡಲು ಲಕ್ಕುಂಡಿ ಗ್ರಾಮ ಪಂಚಾಯಿತಿಯು ಇತ್ತೀಚೆಗೆ ಗ್ರಾಮ ಸಭೆಯಲ್ಲಿ ಮಾಡಿದ ಘೋಷಣೆಯಂತೆ, ಗ್ರಾಮದ ಮಾಬುಸಾಬ ಕೊಚಲಾಪೂರ ಹಾಗೂ ಕಲ್ಲಪ್ಪ ಬೆಟಗೇರಿ ಎಂಬುವರು ಶನಿವಾರ ತಲಾ ಒಂದು ಕೆ.ಜಿ ಪ್ಲಾಸ್ಟಿಕ್ ಕೊಟ್ಟು ಒಂದು ಕೆ.ಜಿ ಸಕ್ಕರೆಯನ್ನು ಪಡೆದರು.

ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ ಇವರಿಬ್ಬರಿಗೂ 1 ಕೆ.ಜಿ ಸಕ್ಕರೆಯನ್ನು ವಿತರಿಸಿ ಮಾತನಾಡಿ, ಪ್ಲಾಸ್ಟಿಕ್‌ನಿಂದ ಪರಿಸರ ಹದಗೆಡುತ್ತಿದೆ. ಜಮೀನಿನಲ್ಲಿ ಹಲವಾರು ವರ್ಷ ಇದ್ದರೂ ಸಹ ಕೊಳೆಯುದಿಲ್ಲ. ಇದು ತುಂಬಾ ಅಪಾಯಕಾರಿಯಾಗಿದೆ. ಈ ಬಗ್ಗೆ ಸರಕಾರ ಜಾಗೃತಿ ಮೂಡಿಸುತ್ತಾ ಬಂದಿದೆ. ಸಾರ್ವಜನಿಕ ಸ್ಥಳದಲ್ಲಿ ಬೇಕಾಬಿಟ್ಟಿಯಾಗಿ ಪ್ಲಾಸ್ಟಿಕ್ ಹಾಳೆಯನ್ನು ಎಸೆಯಲಾಗುತ್ತಿದೆ. ಇದನ್ನು ತಪ್ಪಿಸಲು, ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಪ್ಲಾಸ್ಟಿಕ್ ಮುಕ್ತ ಗ್ರಾಮವನ್ನಾಗಿ ರೂಪಿಸಲು 1 ಕೆ.ಜಿ ಪ್ಲಾಸ್ಟಿಕ್‌ನ್ನು ಕೊಟ್ಟರೆ 1 ಕೆ.ಜಿ ಸಕ್ಕರೆಯನ್ನು ನೀಡಲಾಗುತ್ತದೆ ಎಂದು ಕಳೆದ ಗ್ರಾಮ ಸಭೆಯಲಿ ಘೋಷಣೆ ಮಾಡಲಾಗಿತ್ತು .ಇದಕ್ಕೆ ಸ್ಪಂದಿಸಿ ಇಬ್ಬರು ನಾಗರಿಕರು ಪ್ಲಾಸ್ಟಿಕ್ ತಂದುಕೊಟ್ಟು ಒಂದು ಕೆ.ಜಿ ಸಕ್ಕರೆಯನ್ನು ತೆಗೆದುಕೊಂಡು ಪ್ಲಾಸ್ಟಿಕ್ ಮುಕ್ತ ಗ್ರಾಮ ಮಾಡಲು ಚಾಲನೆ ನೀಡಿದ್ದಕ್ಕೆ ವಂದನೆಗಳನ್ನು ಸಲ್ಲಿಸಿದರು.

ಅಭಿವೃದ್ಧಿ ಅಧಿಕಾರಿ ಅಮೀರ ನಾಯಕ ಮಾತನಾಡಿ, ಇತಿಹಾಸ ಪ್ರಸಿದ್ಧ ಲಕ್ಕುಂಡಿ ಗ್ರಾಮವನ್ನು ಸ್ವಚ್ಛವಾಗಿಡಲು ಸ್ವಚ್ಛ ಭಾರತ ಮಿಷನ್ ಯೋಜನೆಯನ್ನು ಸಮರ್ಪಕವಾಗಿ ಜಾರಿಗೆ ತರಲು ಸಮುದಾಯವು ಕೈಜೋಡಿಸಬೇಕು ಎಂದು ವಿನಂತಿಸಿಕೊಂಡರು.

ಈ ವೇಳೆ ಗ್ರಾ.ಪಂ ಸದಸ್ಯರು ಹಾಜರಿದ್ದರು.

### ಬೇಡಿಕೆಗಳ ಈಡೇರಿಕೆಗಾಗಿ ಆ. 12ರಿಂದ ಆಶಾ ಕಾರ್ಯಕರ್ತೆಯರ ಅಹೋರಾತ್ರಿ ಧರಣಿ

# ಕೆಲಸದಿಂದ ವಜಾಗೊಳಿಸುವ ಹುನ್ನಾರ




> ಕೊರೋನಾ ಸಮಯದಲ್ಲಿ ಮೊದಲ ಸಾಲಿನ ಯೋಧರಾಗಿ ಕೆಲಸ ಮಾಡಿದ್ದಾರೆ. ಮನೆ-ಮನೆಗೆ ತೆರಳಿ ಅರಿವು ಮೂಡಿಸುವ ಕೆಲಸ ಮಾಡಿದ್ದಾರೆ. ಇಂತಹ ಆಶಾ ಕಾರ್ಯಕರ್ತೆಯರ ಗೋಳನ್ನು ಯಾವ ಸರ್ಕಾರವೂ ಕೇಳುತ್ತಿಲ್ಲ. ರಾಜ್ಯದಲ್ಲಿ ಅಧಿಕಾರ ನಡೆಸುತ್ತಿರುವ ಕಾಂಗ್ರೆಸ್ ಹಾಗೂ ಅಧಿಕಾರ ನಡೆಸಿರುವ ಜೆಡಿಎಸ್ ಹಾಗೂ ಬಿಜೆಪಿ ಪಕ್ಷಗಳು ನಮ್ಮ ಸಮಸ್ಯೆ ಆಲಿಸುವ ಪ್ರಯತ್ನ ಮಾಡಿಲ್ಲ ಎಂದು ಡಿ. ನಾಗಲಕ್ಷ್ಮೀ ಬೇಸರ ವ್ಯಕ್ತಪಡಿಸಿದರು.

■ **ವಿಜಯಸಾಕ್ಷಿ ಸುದ್ದಿ, ಗದಗ**

ಆಶಾ ಕಾರ್ಯಕರ್ತೆಯರಿಗೆ ಮೊದಲು ತರಬೇತಿ ನೀಡಿ ಕೆಲಸಕ್ಕೆ ಸೇರಿಸಿಕೊಳ್ಳುತ್ತಾರೆ. ತರಬೇತಿ ನಂತರವೂ ವಿದ್ಯಾರ್ಹತೆ ಎಂಬ ಮಾನದಂಡ ಹೇರಿ ಕೆಲಸದಿಂದ ವಜಾಗೋಳಿಸುವ ಹುನ್ನಾರ ನಡೆದಿದೆ. ಯಾವುದೇ ಆಶಾ ಕಾರ್ಯಕರ್ತೆಯರನ್ನು ತೆಗೆದು ಹಾಕದಂತೆ ಹಾಗೂ ವೇತನ ಹೆಚ್ಚಳಕ್ಕಾಗಿ ಆಗ್ರಹಿಸಿ ರಾಜ್ಯಾದ್ಯಂತ ಆಗಸ್ಟ್ 12ರಿಂದ 14ರವರೆಗೆ ಧರಣಿ ಹಮ್ಮಿಕೊಂಡಿದ್ದು, ಗದಗ ನಗರದ ಗಾಂಧಿ ಸರ್ಕಲ್‌ನಲ್ಲಿ ಅಹೋರಾತ್ರಿ ಧರಣಿ ನಡೆಸಲು ತಿರ್ಮಾನಿಸಲಾಗಿದೆ ಎಂದು ಕರ್ನಾಟಕ ರಾಜ್ಯ ಸಂಯುಕ್ತ ಆಶಾ ಕಾರ್ಯಕರ್ತೆಯರ ಸಂಘದ ಕಾರ್ಯದರ್ಶಿ ಡಿ. ನಾಗಲಕ್ಷ್ಮೀ ಹೇಳಿದರು.

ಇಲ್ಲಿನ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಆಶಾ ಕಾರ್ಯಕರ್ತೆಯರು 17 ವರ್ಷಗಳಿಂದ ತಳ ಹಂತದಲ್ಲಿ ಕೆಲಸ ಮಾಡುತ್ತಿದ್ದಾರೆ. ರಾಷ್ಟ್ರೀಯ ಆರೋಗ್ಯ ಯೋಜನೆಯಡಿಯಲ್ಲಿ ಆಶಾ ಕಾರ್ಯಕರ್ತೆಯರ ಹಗಲು-ರಾತ್ರಿ ಸೇವೆಯಿಂದ ಶಿಶು ಮರಣ, ತಾಯಿ ಮರಣದ ಪ್ರಮಾಣದಲ್ಲಿ ಗಣನೀಯ ಇಳಿಕೆ ಆಗಿದೆ ಎಂದು ಹೇಳಿದರು. ಕೇವಲ 5 ಸಾವಿರ ಪ್ರೋತ್ಸಾಹ ಧನ ನೀಡುತ್ತಿದ್ದಾರೆ. 15 ಸಾವಿರ ರೂ ಪ್ರೋತ್ಸಾಹಧನ ನೀಡುವಂತೆ ಬೆಂಗಳೂರಿನಲ್ಲಿ ಅಹೋರಾತ್ರಿ ಧರಣಿ ಮಾಡಿದೆವು. 10 ಸಾವಿರ ರೂ ನೀಡುವುದಾಗಿ ಸಿಎಂ ಭರವಸೆ ನೀಡಿದರು. ಆದರೆ, ಅದು ಭರವಸೆಯಾಗಿಯೇ ಉಳಿಯಿತು. ಸಿಎಂ ಸಿದ್ದರಾಮಯ್ಯ ಸುಳ್ಳು ಹೇಳಿ ನಮ್ಮನ್ನು ಪ್ರತಿಭಟನೆಯಿಂದ ಹಿಂದೆ ಸರಿಯುವಂತೆ ಮಾಡಿದರು. ಸದ್ಯ ಸೇವೆ ಮಾಡುತ್ತಿರುವ ಕಾರ್ಯಕರ್ತೆಯರನ್ನು ಕೆಲಸದಿಂದ ತಗೆಯುವ ಹುನ್ನಾರ ನಡೆದಿದೆ ಎಂದು ಆರೋಪಿಸಿದರು.

ಆಶಾ ಕಾರ್ಯಕರ್ತೆಯರು 17 ವರ್ಷದಿಂದ ತರಬೇತಿ ಪಡೆದು ತಜ್ಞರಂತೆ ಕೆಲಸ ಮಾಡುತ್ತಿದ್ದಾರೆ. ಮೌಲ್ಯಮಾಪನ, ಶಿಕ್ಷಣದ ಹೆಸರಿನಲ್ಲಿ ಕಾರ್ಯಕರ್ತೆಯರನ್ನು ಕೈಬಿಡುವ ಕೆಲಸ ಮಾಡಲಾಗುತ್ತಿದೆ. 60 ವರ್ಷ ಆದವರನ್ನು ಏಕಾಏಕಿ ಕೆಲಸದಿಂದ ಕೈ ಬಿಡಲಾಗಿದೆ. ಕೈ ಬಿಡುವ ಮುನ್ನ ಇಡಿಗಂಟು ನೀಡಬೇಕು ಎಂದು ಸರ್ಕಾರಕ್ಕೆ ಒತ್ತಾಯಿಸಿದರು. ಈ ವೇಳೆ ಗದಗ ಜಿಲ್ಲಾ ಗೌರವಾಧ್ಯಕ್ಷ ಸುರೇಶ್ ಜಿ, ಭಾಗ್ಯಜ್ಯೋತಿ, ಲಕ್ಷ್ಮೀ ಪೂಜಾರ, ಗೌರಮ್ಮ ಕಟ್ಟಿಮನಿ, ಪ್ರೇಮಾ ಪಾಟೀಲ, ರಮಿಜಾ ಹಾವೇರಿ, ಸುಮಂಗಲಾ ತಳವಾರ, ಮಂಜುಳಾ ಹೊಸೂರ, ಅನ್ನಪೂರ್ಣ ಖಾಟವಾ, ಗೀತಾ ಭಜಂತ್ರಿ, ಶಾಹಿನ್ ಅಲ್ಮಾಸ್ ಉಪಸ್ಥಿತರಿದ್ದರು.

## ಎಚ್‌ಆರ್‌ಎಮ್‌ಎಸ್ ಸಮಸ್ಯೆ ಪರಿಹರಿಸಲು ಕಾರ್ಯಾಗಾರ



■ **ವಿಜಯಸಾಕ್ಷಿ ಸುದ್ದಿ, ಗದಗ**

ವೇತನ ಖಾತೆಗೆ ಸಂಬಂಧಿಸಿದ ಎಚ್.ಆರ್.ಎಮ್.ಎಸ್ ತಾಂತ್ರಿಕ ಸಮಸ್ಯೆ ಪರಿಹರಿಸುವ ಉದ್ದೇಶದಿಂದಾಗಿ ಶೀಘ್ರದಲ್ಲಿಯೇ ರಾಜ್ಯಮಟ್ಟದ ಅಧಿಕಾರಿಗಳು ಗದಗ ನಗರದಲ್ಲಿ ಕಾರ್ಯಾಗಾರವನ್ನು ಸಂಘಟಿಸಿ ಅದನ್ನು ಪರಿಹರಿಸಲಿದ್ದಾರೆ ಎಂದು ರಾಜ್ಯ ಸರಕಾರಿ ನೌಕರ ಸಂಘದ ಗದಗ ಜಿಲ್ಲಾಧ್ಯಕ್ಷ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಬಸವರಾಜ ಬಳ್ಳಾರಿ ಹೇಳಿದರು.

ನಗರದ ಸರಕಾರಿ ನೌಕರ ಭವನದಲ್ಲಿ ಶುಕ್ರವಾರ ನಡೆದ ರಾಜ್ಯ ಸರಕಾರಿ ನೌಕರ ಸಂಘದ ಗದಗ ಜಿಲ್ಲಾ ಘಟಕದ ಕಾರ್ಯಕಾರಿಣಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ವೇತನ ಕುರಿತ ಎಚ್.ಆರ್. ಎಮ್.ಎಸ್ ಸಮಸ್ಯೆಯನ್ನು ಗದಗ ನಗರದಲ್ಲಿ ರಾಜ್ಯಮಟ್ಟದ ಅಧಿಕಾರಿಗಳು ಪರಿಹರಿಸಲಿದ್ದಾರೆ. ರಾಜ್ಯ ಸರಕಾರಿ ನೌಕರ ಸಂಘದ ರಾಜ್ಯಾಧ್ಯಕ್ಷರಾಗಿರುವ ಸಿ.ಎಸ್. ಷಡಕ್ಷರಿ ಅವರ ಮಾರ್ಗದರ್ಶನದಲ್ಲಿ ಸರಕಾರಿ ನೌಕರ ಸಮಸ್ಯೆಗಳನ್ನು ಪರಿಹರಿಸಲಾಗುವದು. ಅಲ್ಲದೇ ಜ್ಯೋತಿ ಸಂಜೀವಿನಿ ಸೇರಿದಂತೆ ನೌಕರರ ಹಲವು ಬೇಡಿಕೆಗಳನ್ನು ರಾಜ್ಯ ಸರಕಾರದ ಗಮನಕ್ಕೆ ತಂದು ಈಡೇರಿಸಲಾಗುವದು ಎಂದು ತಿಳಿಸಿದರು.

ಮೈಸೂರಿನಲ್ಲಿ ಇತ್ತೀಚೆಗೆ ನಡೆದ ಸಂಘದ ರಾಜ್ಯ ಕಾರ್ಯಕಾರಿಣಿ ಸಭೆಯಲ್ಲಿ ಚರ್ಚೆಯಾಗಿರುವ ಸಂಗತಿಗಳನ್ನು ಸಭೆಯ ಗಮನಕ್ಕೆ ತಂದರಲ್ಲದೇ ಜಿಲ್ಲೆಯ ತಾಲೂಕು ಸಂಘಗಳ ಬ್ಯಾಂಕ್ ಖಾತೆ ಹಾಗೂ ಅಡಿಟ್ ಮಾಡಿಸುವ ಕುರಿತು ಮಾಹಿತಿ ನೀಡಿದರು.

ಗದಗ ಸರಕಾರಿ ನೌಕರ ಸಂಘದ ಗೌರವಾಧ್ಯಕ್ಷ ಡಿ.ಎಸ್. ತಳವಾರ ಮಾತನಾಡಿ, ರಾಜ್ಯ ಸರಕಾರಿ ನೌಕರ ಸಂಘದ ಉದ್ದೇಶಗಳು ಹಾಗೂ ನೌಕರರ ಕರ್ತವ್ಯಗಳ ಬಗ್ಗೆ ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಕಾರ್ಯಾಧ್ಯಕ್ಷ ಸಿದ್ದಣ್ಣ ಲಿಂಗದಾಳ, ತಾಲೂಕಾಧ್ಯಕ್ಷ ದಾನಪ್ಪಗೌಡ, ಶಿವಪ್ಪ ಹದ್ಲಿ, ಹಿರೇಮಠ, ದುರಗಣ್ಣವರ, ಕೊಪ್ಪದ, ಅಜಯ ಕಲಾಲ ಸೇರಿದಂತೆ ಹಲವರಿದ್ದರು. ಸಂಘದ ಪದಾಧಿಕಾರಿ ಮುತ್ತು ಮಲಕಶೆಟ್ಟಿ ನಿರೂಪಿಸಿದರು, ರಾಜು ಕಂಟೆಗೊಣ್ಣವರ ವಂದಿಸಿದರು.

## ನಾಳೆ ಪೂರ್ವಭಾವಿ ಸಭೆ

■ **ವಿಜಯಸಾಕ್ಷಿ ಸುದ್ದಿ, ಗದಗ**

ಸರ್ಕಾರದ ಆದೇಶದನ್ವಯ ಆಗಸ್ಟ್ 16 ರಂದು ಆಚರಿಸಲಾಗುವ ಕೃಷ್ಣ ಜಯಂತಿ ನಿಮಿತ್ತ ಆ. 4 ರಂದು ಮಧ್ಯಾಹ್ನ 12 ಗಂಟೆಗೆ ಅಪರ ಜಿಲ್ಲಾಧಿಕಾರಿಗಳು, ಗದಗ ಇವರ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ಕರೆಯಲಾಗಿದೆ. ಸಭೆಗೆ ಹಾಜರಾಗಿ ಸಲಹೆ/ ಅಭಿಪ್ರಾಯ ನೀಡಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪೂರ್ವಭಾವಿ ಸಭೆ

■ **ವಿಜಯಸಾಕ್ಷಿ ಸುದ್ದಿ, ಗದಗ**

ಸರ್ಕಾರದ ಆದೇಶದನ್ವಯ ಆಗಸ್ಟ್ 9 ರಂದು ಆಚರಿಸಲಾಗುವ ನುಲಿಯ ಚಂದಯ್ಯನವರ ಜಯಂತಿ ನಿಮಿತ್ತ ಆ 4 ರಂದು ಬೆ 11 ಗಂಟೆಗೆ ಅಪರ ಜಿಲ್ಲಾಧಿಕಾರಿಗಳು, ಗದಗ ಇವರ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ಕರೆಯಲಾಗಿದೆ. ಸಭೆಗೆ ಹಾಜರಾಗಿ ಸಲಹೆ/ ಅಭಿಪ್ರಾಯ ನೀಡಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನರೇಗಲ್ಲದಲ್ಲಿ 'ಮನೆ ಮನೆಗೆ ಪೊಲೀಸ್'

■ **ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ನರೇಗಲ್ಲ ಪೊಲೀಸ್ ಠಾಣಾ ವ್ಯಾಪ್ತಿಯ ಗ್ರಾಮಗಳಿಗೆ ಭೇಟಿ ನೀಡಿ ಅಲ್ಲಿನ ಸಾರ್ವಜನಿಕರ ಕುಂದುಕೊರತೆಗಳಿಗೆ ಸ್ಥಳದಲ್ಲಿಯೇ ಪರಿಹಾರ ನೀಡುವುದರ ಜೊತೆ-ಗೆ, ಜನಜಾಗೃತಿ ಮೂಡಿಸುವ ಕಾರ್ಯಕ್ರಮವನ್ನು ನರೇಗಲ್ಲ ಪೊಲೀಸರು ಕೈಗೊಂಡಿದ್ದಾರೆ. '

ಪಿಎಸ್‌ಐ ಐಶ್ವರ್ಯ ನಾಗರಾಳ ಅವರ ಸೂಚನೆಯ ಮೇರೆಗೆ, ಹಿರಿಯ ಅಧಿಕಾರಿಗಳ ಮಾರ್ಗದರ್ಶನದಂತೆ ಈ ನೂತನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. 'ಮನೆ ಮನೆಗೆ ಪೊಲೀಸ್' ಎಂಬ ಪರಿಕಲ್ಪನೆಯ ಹಿನ್ನೆಲೆಯಲ್ಲಿ ಇತ್ತೀಚೆಗೆ ಗುಜಮಾಗಡಿ ಗ್ರಾಮದ ವಿವಿಧ ಬಡಾವಣೆಗಳಲ್ಲಿ ಕಿರಣಕುಮಾರ ಹಿರೇಮಠ ಬೀಟ್ ಸಂಚಾರ ನಡೆಸಿ ಜನಜಾಗೃತಿ ಕೈಗೊಂಡರು.



ಈ ವೇಳೆ ವಿದ್ಯಾರ್ಥಿಗಳು, ಮಹಿಳೆಯರು, ವೃದ್ಧರನ್ನು ಅವರವರ ಮನೆಯಲ್ಲಿಯೇ ಭೇಟಿಯಾಗಿ ಅವರಿಂದ ಮಾಹಿತಿ ಸಂಗ್ರಹಿಸಿ, ಅಹವಾಲುಗಳನ್ನು ಸ್ವೀಕರಿಸಿದರು. ಹೆಚ್ಚಿನ ಭದ್ರತೆಗಾಗಿ ಸಾಧ್ಯವಾದವರು ನೀವು ವಾಸಿಸುವ ಮನೆಗಳಿಗೆ ಸಿಸಿ ಕ್ಯಾಮೆರಾ ಅಳವಡಿಸಿಕೊಳ್ಳಿ. ಮನೆಗಳ್ಳತನ, ಸರಗಳ್ಳತನದಂತಹ ಅವಘಡಗಳೇನಾದರೂ ನಡೆದರೆ ತಕ್ಷಣ ತುರ್ತು ಸಹಾಯವಾಣಿ ಸಂಖ್ಯೆ 112, ಸೈಬರ್ ಅಪರಾಧಗಳ ಸಹಾಯವಾಣಿ ಸಂಖ್ಯೆ 1930ಕ್ಕೆ ಕರೆ ಮಾಡಿ ತಮ್ಮ ದೂರನ್ನು ದಾಖಲಿಸುವುದರ ಮೂಲಕ ಪರಿಹಾರ ಪಡೆಯಬಹುದೆಂದು ತಿಳಿಸಿದರು.

## ನೂತನ ಅಪರ ಜಿಲ್ಲಾಧಿಕಾರಿ ಡಾ. ದುರುಗೇಶರಿಗೆ ಸನ್ಮಾನ

■ **ವಿಜಯಸಾಕ್ಷಿ ಸುದ್ದಿ, ಗದಗ**

ಸರ್ಕಾರದ ಆದೇಶದಂತೆ ಅಧಿಕಾರ ವಹಿಸಿಕೊಂಡ ಗದಗ ಜಿಲ್ಲೆಯ ನೂತನ ಅಪರ ಜಿಲ್ಲಾಧಿಕಾರಿ ಡಾ. ದುರುಗೇಶ ಅವರಿಗೆ ಲಕ್ಕುಂಡಿ ಪಾರಂಪರಿಕ ಅಭಿವೃದ್ಧಿ ಪ್ರಾಧಿಕಾರದ ಆಯುಕ್ತ ಡಾ. ಶರಣು ಗೋಗೇರಿ ಶಾಲು ಹೊದಿಸಿ ನೆನಪಿನ ಕಾಣಿಕೆ ನೀಡಿ ಸನ್ಮಾನಿಸಿದರು.



ಈ ಸಂದರ್ಭದಲ್ಲಿ ಗದಗ ಜಿಲ್ಲಾ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಡಾ. ಬಸವರಾಜ ಬಳ್ಳಾರಿ, ಪದವಿಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ವಾಸನಾಯಕ, ಶಾಲಾ ಶಿಕ್ಷಣ ಇಲಾಖೆಯ ಜಿಲ್ಲಾ ಉಪ ಸಮನ್ವಯ ಅಧಿಕಾರಿ ಎಂ.ಎಚ್. ಕಾಂಬಳೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಮೆಹಬೂಬ್ ತುಂಬರಮಟ್ಟಿ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಅಮಿತ್ ಬಿದರಿ, ಜಿಲ್ಲಾ ವಾರ್ತಾಧಿಕಾರಿ ವಸಂತ ಮಡ್ಲೂರ ಮುಂತಾದವರಿದ್ದರು.

### ಬೇರ್‌ಫೂಟ್ ಟೆಕ್ನಿಷಿಯನ್ ಗಳಿಂದ ತಾಲೂಕಿನ ಇಒ ಅವರಿಗೆ ಮನವಿ

# ರೋಣ ತಾಲೂಕಿನ ನರೇಗಾ ಬಿಎಫ್ ಟಿ ಗಳಿಗೆ 5 ತಿಂಗಳಿಂದ ಆಗದ ಸಂಬಳ!

■ **ವಿಜಯಸಾಕ್ಷಿ ಸುದ್ದಿ, ರೋಣ**

ಮಹಾತ್ಮಾ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ (MGNREG) ಅಡಿಯಲ್ಲಿ ರೋಣ ತಾಲೂಕಿನ ವಿವಿಧ ಗ್ರಾಮ ಪಂಚಾಯತಿ ಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಬೇರ್‌ಫೂಟ್ ಟೆಕ್ನಿಷಿಯನ್ ಗಳಿಗೆ ಕಳೆದ 5 ತಿಂಗಳಿಂದ ಸಂಬಳ ಆಗದಿರುವ ಹಿನ್ನೆಲೆಯಲ್ಲಿ ಆರ್ಥಿಕ ಸಂಕಷ್ಟಕ್ಕೆ ಒಳಗಾಗಿರುವ ಬಗ್ಗೆ ತಾಲೂಕ ಪಂಚಾಯತ್ ಕಾರ್ಯ ನಿರ್ವಾಹಕ ಅಧಿಕಾರಿ ಚಂದ್ರಶೇಖರ ಬಿ. ಕಂದಕೂರ ಅವರಿಗೆ ಮನವಿ ಸಲ್ಲಿಸಿ ಗಮನ ಸೆಳೆಯಲಾಯಿತು.



ರೋಣ ತಾಲೂಕು ಪಂಚಾಯತನಲ್ಲಿ ಕಾರ್ಯ ನಿರ್ವಾಹಕ ಅಧಿಕಾರಿಗಳಿಗೆ ಮನವಿ ಸಲ್ಲಿಸಿದ ಅವರು, ರೋಣ ತಾಲೂಕಿನಲ್ಲಿ ಕಾರ್ಯ ನಿರ್ವಹಿಸುತ್ತಿರುವ 9 ಬೇರ್‌ಫೂಟ್ ಟೆಕ್ನಿಷಿಯನ್‌ಗಳ (BFT) ಸಹಿತ ಕರ್ನಾಟಕ ರಾಜ್ಯ ನರೇಗಾ ಕಾರ್ಮಿಕರ ಕ್ಷೇಮಾಭಿವೃದ್ಧಿ ಸಂಘ ಮತ್ತು ಕರ್ನಾಟಕ ರಾಜ್ಯ ಬೇರ್‌ಫೂಟ್ ಟೆಕ್ನಿಷಿಯನ್ ಕ್ಷೇಮಾಭಿವೃದ್ಧಿ ಸಂಘದಿಂದ ಸಲ್ಲಿಸಲಾದ ಈ ಮನವಿಯಲ್ಲಿ, ಕಳೆದ ಮಾರ್ಚ್ ತಿಂಗಳಿನಿಂದ ಸಂಬಳ ಪಾವತಿ ಯಾಗದೇ ಇರುವುದರಿಂದ ತೀವ್ರ ಆರ್ಥಿಕ ತೊಂದರೆ ಎದುರಾಗಿದೆ ಎಂದು ಮನವಿಯಲ್ಲಿ ವಿವರಿಸಲಾಗಿದೆ.

ಸಂಬಳ ಆಗದಿರುವ ಹಿನ್ನೆಲೆಯಲ್ಲಿ ಕುಟುಂಬ ನಿರ್ವಹಣೆ, ಮಕ್ಕಳ ಶಿಕ್ಷಣ, ವೈದ್ಯಕೀಯ ವೆಚ್ಚಗಳು, ಪ್ರಯಾಣದ ಖರ್ಚು ಮತ್ತು ಸಾಲದ ಮರುಪಾವತಿ ಗಳನ್ನು ನಿಭಾಯಿಸಲು ತೀವ್ರ ಸಮಸ್ಯೆಯಾಗಿದೆ. ಹಲವಾರು ಸ್ನೇಹಿತರು, ಸಂಬಂಧಿಕರು ಮತ್ತು ಖಾಸಗಿ ಸಾಲಗಾರರಿಂದ ಹಣವನ್ನು ಸಾಲ ಪಡೆಯುವ ಪರಿಸ್ಥಿತಿ ಎದುರಾಗಿದ್ದು, ಇದು ಮಾನಸಿಕ ಒತ್ತಡ ಮತ್ತು ಮುಜುಗರಕ್ಕೆ ಕಾರಣವಾಗಿದೆ. ಬಾಕಿ ಸಂಬಳವನ್ನು ತಕ್ಷಣ ಪಾವತಿಸುವಂತೆ ಈ ಮನವಿಯಲ್ಲಿ ಕೋರಲಾಗಿದೆ. ಅಲ್ಲದೆ, ಕ್ಷೇತ್ರ ಭೇಟಿಯ ಸಂದರ್ಭದಲ್ಲಿ ಆರೋಗ್ಯ ಸಮಸ್ಯೆಗಳು ಮತ್ತು ಅಪಘಾತಗಳಿಗೆ ಸಂಬಂಧಿಸಿದಂತೆ ವಿಮಾ ಸೌಲಭ್ಯವನ್ನು ಒದಗಿಸುವಂತೆ ಮತ್ತು ಜಿಲ್ಲೆಯಾದ್ಯಂತ ಃಈಖಿಗಳ ನವೀಕರಣ ಪ್ರಕ್ರಿಯೆಯನ್ನು ಏಕಕಾಲದಲ್ಲಿ ನಡೆಸುವಂತೆ ವಿನಂತಿಸಿದ್ದಾರೆ.

ಬೇರ್‌ಫೂಟ್ ಟೆಕ್ನಿಷಿಯನ್‌ಗಳ ಗೋಳನ್ನು ಗಂಭೀರವಾಗಿ ಪರಿಗಣಿಸಿ, ಬಾಕಿ ಉಳಿಸಿ ಕೊಂಡಿರುವ ಸಂಬಳವನ್ನು ತಕ್ಷಣ ಪಾವತಿಸಲು ಮತ್ತು ಭವಿಷ್ಯದಲ್ಲಿ ಸಕಾಲಿಕವಾಗಿ ವೇತನ ಒದಗಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಕಾರ್ಯನಿರ್ವಾಹಕ ಅಧಿಕಾರಿಗಳಲ್ಲಿ ಒತ್ತಾಯ ಮಾಡಿದರು.

ಕಾರ್ಯ ನಿರ್ವಾಹಕ ಅಧಿಕಾರಿಗಳಾದ ಚಂದ್ರಶೇಖರ ಬಿ ಕಂದಕೂರ ಈ ಮನವಿ ಸ್ವೀಕರಿಸಿ ಮಾತನಾಡಿ, ಸಂಬಳ ಇಲ್ಲದೆ ಬದುಕು ನಡೆಸುವುದು ಕಷ್ಟ. ತಾಂತ್ರಿಕ ದೋಷದ ಹಿನ್ನೆಲೆಯಲ್ಲಿ ಸಂಬಳ ನಿಮಗೆ ತಡವಾಗಿದೆ, ಶೀಘ್ರವಾಗಿ ನಿಮ್ಮ ಸಮಸ್ಯೆಯನ್ನು ಮೇಲಾಧಿಕಾರಿಗಳ ಗಮನಕ್ಕೆ ತಂದು ಆದಷ್ಟು ಬೇಗ ಸಂಬಳ ಆಗಲು ಶ್ರಮಿಸಲಾಗುವುದು ಎಂದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka